ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಪಟ್ಟಿ – ೬**

ಒಟ್ಟು ಪ್ರಶ್ನೆಗಳು – ೮೯

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತನೆಯ ಅಧಿವೇಶನ**
**(ಮುಂದುವರೆದ ಉಪವೇಶನ)**

**ಮಂಗಳವಾರ, ದಿನಾಂಕ : ೨೨ನೇ ಮಾರ್ಚ್, ೨೦೧೬**

---

## ಸಮೂಹ – II

೧. ಇಂಧನ ಸಚಿವರು

೨. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೪. ಲೋಕೋಪಯೋಗಿ ಸಚಿವರು

೫. ಸಹಕಾರ ಮತ್ತು ಸಕ್ಕರೆ ಸಚಿವರು

೬. ಕೃಷಿ ರಾಜ್ಯ ಸಚಿವರು

೭. ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು

---

## ಬಾಗಲಕೋಟೆ ಜಿಲ್ಲೆಯ ಮಹಾಲಿಂಗಪುರದ ಮಿರ್ಜಿ ಯಾದವಾಡ ರಸ್ತೆ ಕುರಿತು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ):–**

೫೦೧(೬೮೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಾಗಲಕೋಟೆ ಜಿಲ್ಲೆಯ ಮಹಾಲಿಂಗಪುರದಿಂದ, ಮಿರ್ಜಿ ಯಾದವಾಡ, ಯರಗಟ್ಟಿ ರಸ್ತೆಯನ್ನು ರಾಜ್ಯ ಹೆದ್ದಾರಿಯನ್ನಾಗಿ ಮಾಡಬೇಕೆನ್ನುವ ಬೇಡಿಕೆಯನ್ನು ಸರ್ಕಾರ ಪರಿಗಣಿಸುವುದೇ ;

(ಆ) ಎಷ್ಟು K.M.(ಕಿ.ಮೀ.) ವ್ಯಾಪ್ತಿ ರಸ್ತೆ ಇದೆ ; ಈ ರಸ್ತೆಯನ್ನು ರಾಜ್ಯ ಹೆದ್ದಾರಿಯನ್ನಾಗಿ ಮಾಡಲು ಅಗತ್ಯವಿರುವ ಅಂದಾಜು ವೆಚ್ಚ ಎಷ್ಟು ?

## ಸಿಂದಗಿ ಹಾಗೂ ಆಲಮೇಲದ APMC ಪ್ರಾಂಗಣದ ಅಭಿವೃದ್ಧಿ ಕುರಿತು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ):–**

೫೦೨(೬೮೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಜಿಲ್ಲೆಯ ಸಿಂದಗಿಯಲ್ಲಿನ APMC ಯ ಪ್ರಾಂಗಣದ ಹಾಗೂ ಆಲಮೇಲ APMC ಪ್ರಾಂಗಣದ ಅಭಿವೃದ್ಧಿಗೆ ಕಳೆದ ಸಾಲಿನ ಬಜೆಟ್‌ನಲ್ಲಿ ಘೋಷಿಸಲಾದ ಅನುದಾನ ಎಷ್ಟು ; ಬಿಡುಗಡೆಯಾದ ಅನುದಾನ ಎಷ್ಟು ; ವಿನಿಯೋಗಿಸಲಾದ ಹಣ ಎಷ್ಟು ;

(ಆ) ಸದರಿ APMC ಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಎರಡೂ APMC ಗಳಿಗೆ ಒದಗಿಸಲಾಗಿರುವ ಸೌಲಭ್ಯಗಳು ಯಾವುವು ;

(ಈ) ಈ ವರ್ಷದ ಬಜೆಟ್‌ನಲ್ಲಿ ಈ APMC ಗಳ ಪ್ರಾಂಗಣದ ಅಭಿವೃದ್ಧಿಗೆ ತೆಗೆದುಕೊಳ್ಳುವ ಕ್ರಮಗಳೇನು ; ಯಾವಾಗ ಅಭಿವೃದ್ಧಿಯ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು ?

## ರಾಜ್ಯದಲ್ಲಿ ರೈತರಿಗೆ ನೀಡುವ ಸಬ್ಸಿಡಿಯ ಬಗ್ಗೆ

**ಶ್ರೀ ಅಶ್ವತ್‌ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೦೩(೬೭೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ರೈತರಿಗೆ ತೋಟಗಾರಿಕೆ ಚಟುವಟಿಕೆಯನ್ನು ಉತ್ತೇಜಿಸಲು ಇರುವ ಸಬ್ಸಿಡಿಯುಕ್ತ ಯೋಜನೆಗಳು ಯಾವುವು ;

(ಆ) ತೋಟಗಾರಿಕೆ ಇಲಾಖೆಯಿಂದ ರಾಜ್ಯಾದ್ಯಂತ ರೈತರು ಸಬ್ಸಿಡಿ ಪಡೆದ ಯೋಜನೆಗಳು ಯಾವುವು ; ಯಾವ ಯಾವ ಯೋಜನೆಗಳಿಗೆ ಎಷ್ಟು ಎಷ್ಟು ಹಣ ಪಡೆದಿದ್ದಾರೆ ? (ಜಿಲ್ಲಾವಾರು ರೈತರ ವಿವರ ನೀಡುವುದು)

## ೨೦೧೪–೧೫ರಲ್ಲಿ ಕೇಂದ್ರ ಸರ್ಕಾರದಿಂದ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಕ್ಕೆ ಹಣ ಬಿಡುಗಡೆ ಬಗ್ಗೆ

**ಶ್ರೀ ಅಶ್ವತ್‌ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೦೪(೬೭೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫ರಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯದ ಅಲ್ಪಸಂಖ್ಯಾತರ ಅಭಿವೃದ್ಧಿ ಕಲ್ಯಾಣ ಕಾರ್ಯಕ್ರಮಗಳಿಗೆ ಬಿಡುಗಡೆ ಮಡಿದ ಹಣವೆಷ್ಟು ; ಬಿಡುಗಡೆ ಮಾಡಿದ ಹಣದಲ್ಲಿ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ ;

(ಆ) ಕೇಂದ್ರ ಸರ್ಕಾರದ ಅಲ್ಪಸಂಖ್ಯಾತರ ಕಲ್ಯಾಣ ಮಂತ್ರಾಲಯವು ಸೂಚಿಸಿರುವ ಯೋಜನೆಗಳು ಯಾವುವು ; ಅಲ್ಪಸಂಖ್ಯಾತರರು ಎಂದು ಯಾವ ಯಾವ ಸಮಾಜ ಅಥವಾ ಧರ್ಮಗಳ ಆಧಾರದ ವ್ಯಾಪ್ತಿಯಲ್ಲಿ ಕಾರ್ಯಕ್ರಮ ರೂಪಿಸಲಾಗಿದೆ ?

## ಹೈದರಾಬಾದ್–ಕರ್ನಾಟಕ ಪ್ರದೇಶದಲ್ಲಿ ಬೆಳೆಹಾನಿ ಸಮೀಕ್ಷೆ, ಹಾನಿಗೊಳಗಾದ ರೈತರ ಸಂಖ್ಯೆಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೫೦೫(೬೫೫) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರವು ಹೈದರಾಬಾದ್–ಕರ್ನಾಟಕ ಪ್ರದೇಶದ ಜಿಲ್ಲೆಗಳಲ್ಲಿ ರೈತರ ಬೆಳೆಹಾನಿ ಸಮೀಕ್ಷೆ ನಡೆಸಿದಯೇ ; ನಡೆಸಿದ್ದರೆ, ಹಾನಿಗೊಳಗಾದ ರೈತರ ಸಂಖ್ಯೆ ಎಷ್ಟು ; (ಎಕರೆವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಸಮೀಕ್ಷೆಯಲ್ಲಿ ಪ್ರತಿ ಎಕರೆಗೆ ನಿಗದಿ ಪಡಿಸಿದ ಪರಿಹಾರ ಮೊತ್ತ ಎಷ್ಟು ; (ನೀರಾವರಿ ಹಾಗೂ ಒಣಬೇಸಾಯದ ಬಗ್ಗೆ ಪ್ರತ್ಯೇಕವಾಗಿ ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸದರಿ ಬರ ಪರಿಹಾರ ವಿತರಣೆಗಾಗಿ ಕೇಂದ್ರದಿಂದ ಬಿಡುಗಡೆಯಾದಂತಹ ಮೊತ್ತ ಎಷ್ಟು ; ಹೈದರಾಬಾದ್–ಕರ್ನಾಟಕದ ಆರು ಜಿಲ್ಲೆಗಳ ಮಾಹಿತಿ ನೀಡುವುದು ;

(ಈ) ಹೈದರಾಬಾದ್–ಕರ್ನಾಟಕದ ಆರು ಜಿಲ್ಲೆಗಳಲ್ಲಿ ರೈತರ ಬೆಳೆ ಹಾನಿಗೆ ಪರಿಹಾರ ಮೊತ್ತ ವಿತರಿಸಲಾಗಿದೆಯೇ ; ವಿತರಿಸಿದ್ದರೆ, ರೈತರ ಸಂಖ್ಯೆ ಎಕರೆವಾರು, ಜಿಲ್ಲಾವಾರು ಮಾಹಿತಿ ನೀಡುವುದು ;

(ಉ) ವಾಸ್ತವಿಕವಾಗಿ ರೈತರ ಪ್ರತಿ ಎಕರೆಗೆ ನೀಡಿದ ಪರಿಹಾರ ಮೊತ್ತ ಎಷ್ಟು ; ಇಲ್ಲಿಯವರಗೆ ಪರಿಹಾರ ನೀಡಲಾದ ರೈತರ ಸಂಖ್ಯೆ ಎಷ್ಟು ; ನೀರಾವರಿ ಹಾಗೂ ಒಣಬೇಸಾಯದ ಪ್ರತ್ಯೇಕ ಮಾಹಿತಿಯನ್ನು ಜಿಲ್ಲಾವಾರು ನೀಡುವುದು ;

(ಊ) ಇನ್ನೂ ಎಷ್ಟು ಜನ ರೈತರಿಗೆ ಬರ ಪರಿಹಾರ ವಿತರಿಸುವುದು ಬಾಕಿ ಇದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಆತ್ಮಹತ್ಯೆಗೆ ಶರಣಾದ ರೈತರಿಗೆ ಪರಿಹಾರ ಮೊತ್ತ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೫೦೬(೬೫೬) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಲ್ಲಿ ಆತ್ಮಹತ್ಯೆಗೆ ಶರಣಾದ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರೈತರು ಆತ್ಮಹತ್ಯೆಗೆ ಶರಣಾಗಲು ಕಾರಣಗಳೇನು ; ರೈತರು ಆತ್ಮಹತ್ಯೆ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ರೈತರು ಆತ್ಮಹತ್ಯೆಗೆ ಶರಣಾದ ಮೇಲೆ ರೈತರ ಕುಟುಂಬದವರಿಗೆ ಸರ್ಕಾರದ ವತಿಯಿಂದ ನಿಗಧಿಪಡಿಸಿರುವ ಪರಿಹಾರದ ಮೊತ್ತವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಸದರಿ ಪ್ರಕರಣಗಳ ಪೈಕಿ ಇಲ್ಲಿಯವರೆಗೆ ಎಷ್ಟು ಕುಟುಂಬಗಳಿಗೆ ಪರಿಹಾರ ಧನ ವಿತರಿಸಲಾಗಿದೆ ; ಇನ್ನೂ ಉಳಿದ ಕುಟುಂಬಗಳಿಗೆ ಯಾವ ಕಾಲಮಿತಿಯೊಳಗೆ ಪರಿಹಾರ ನೀಡಲಾಗುವುದು ? (ಮಾಹಿತಿ ನೀಡುವುದು)

## ಕೇಂದ್ರ ಸರ್ಕಾರ "ಸರಳ ಸಾಲ ಯೋಜನೆ" ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೫೦೭(೬೫೪) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರಕಾರ "ಸರಳ ಸಾಲಯೋಜನೆ" ಅಡಿಯಲ್ಲಿ ಕಬ್ಬು ಬೆಳೆಗಾರರಿಗೆ ಬಾಕಿ ಪಾವತಿಸಲು ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಮಂಜೂರು ಮಾಡಿದ ಮೊತ್ತ ಎಷ್ಟು ; ಈ ಯೋಜನೆಯ ಅಡಿಯಲ್ಲಿ ಅರ್ಹತೆ ಹಾಗೂ ಷರತ್ತುಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ಹೈದರಾಬಾದ್–ಕರ್ನಾಟಕ ಪ್ರದೇಶದಲ್ಲಿರುವ ಸಕ್ಕರೆ ಕಾರ್ಖಾನೆಗಳು ಎಷ್ಟು ; ಕಾರ್ಖಾನೆವಾರು, ಮೊತ್ತವಾರು ವಿವರ ನೀಡುವುದು)

(ಇ) ಸದರಿ ಯೋಜನೆಯ ಅಡಿಯಲ್ಲಿ ಹೈದರಾಬಾದ್–ಕರ್ನಾಟಕ ಪ್ರದೇಶದ ಆಯ್ಕೆಯಾಗದೆ ಇರುವ ಸಕ್ಕರೆ ಕಾರ್ಖಾನೆಗಳು ಯಾವುವು ; (ಕಾರ್ಖಾನೆವಾರು ಮಾಹಿತಿ ನೀಡುವುದು) ಬಳಕೆಯಾಗದ ಮೊತ್ತ ಎಷ್ಟು ;

(ಈ) ಹೈದರಾಬಾದ್–ಕರ್ನಾಟಕ ಪ್ರದೇಶದಲ್ಲಿ ಕಬ್ಬು ಬೆಳೆಗಾರರಿಗೆ ಪಾವತಿಸಬೇಕಾಗಿರುವ ಬಾಕಿ ಮೊತ್ತ ಎಷ್ಟು ; ಕಳೆದ ೨೦೧೨–೧೩–೨೦೧೩–೧೪ ಹಾಗೂ ೨೦೧೫–೨೦೧೬ ನೇ ಸಾಲಿನ ವರ್ಷವಾರು ಕಾರ್ಖಾನೆವಾರು, ಬಾಕಿ ಮೊತ್ತ ಎಷ್ಟು ? (ವಿವರ ನೀಡುವುದು)

## ಹೈದರಾಬಾದ್–ಕರ್ನಾಟಕ ಪ್ರದೇಶದಲ್ಲಿ ಮಂಜೂರಾದ ರಾಷ್ಟ್ರೀಯ ಹೆದ್ದಾರಿಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೫೦೮(೬೫೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದರಾಬಾದ್–ಕರ್ನಾಟಕ ಪ್ರದೇಶದಲ್ಲಿ ಮಂಜೂರಾದ ರಾಷ್ಟ್ರೀಯ ಹೆದ್ದಾರಿಗಳಾವುವು ; ಪ್ರಸ್ತಾವನೆ ಹಂತದಲ್ಲಿರುವ ರಾಷ್ಟ್ರೀಯ ಹೆದ್ದಾರಿಗಳಾವುವು ; (ವಿವರ ನೀಡುವುದು)

(ಆ) ಮೇಲ್ಕಾಣಿಸಿದ ಯೋಜನೆಗಳ ಕಳೆದ ೫ ವರ್ಷದ ಪ್ರಗತಿಯನ್ನು ನೀಡುವುದು ? (ಯೋಜನೆವಾರು, ಕಿ.ಮೀ ಹಾಗೂ ವರ್ಷವಾರು ಮಾಹಿತಿ ನೀಡುವುದು)

## ಆಶಾಕಿರಣ ಯೋಜನೆ ಜಾರಿ ವಿಚಾರ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೦೯(೬೩೩) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆಶಾಕಿರಣ ಯೋಜನೆ ಸರ್ಕಾರದಲ್ಲಿ ಎಂದಿನಿಂದ ಜಾರಿಯಲ್ಲಿದೆ ;

(ಆ) ಈವರೆಗೆ ಈ ಯೋಜನೆ ಅಡಿಯಲ್ಲಿ ಗುರುತಿಸಲಾದ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಯೋಜನೆಯ ಯಶಸ್ವಿಗಾಗಿ ಸರ್ಕಾರ ಯಾವ ರೀತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ಮತ್ತು ನಿಗದಿ ಪಡಿಸಲಾದ ಅನುದಾನ ಎಷ್ಟು ಖರ್ಚು ಮಾಡಲಾದ ಮೊತ್ತ ಎಷ್ಟು ? (ವಿವರ ನೀಡುವುದು)

## ವಿದ್ಯುತ್ ಸ್ಥಾವರಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧೦(೫೧೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ವಿದ್ಯುತ್ ಸ್ಥಾವರಗಳೆಷ್ಟು ; ಈ ವಿದ್ಯುತ್ ಸ್ಥಾವರಗಳಿಂದ ಉಂಟಾಗುವ ವಾಯು ಮಾಲಿನ್ಯ, ಶಬ್ದಮಾಲಿನ್ಯ ತಡೆಯಲು ಸರ್ಕಾರದಿಂದ ಕೈಗೊಂಡಿರುವ ಕ್ರಮಗಳೇನು ;

(ಆ) ಕೈಗಾ ವಿದ್ಯುತ್ ಸ್ಥಾವರದಿಂದ ಸ್ಥಳೀಕರಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ ; (ವಿವರ ನೀಡುವುದು)

(ಇ) ವಿಜಯಪುರ ಜಿಲ್ಲೆಯ ಕೂಡಗಿ ವಿದ್ಯುತ್ ಸ್ಥಾವರ ಪೂರ್ಣ ಪ್ರಮಾಣದಲ್ಲಿ ಕಾರ್ಯಾರಂಭ ಮಾಡುವುದು ಯಾವಾಗ ಹಾಗೂ ಕೂಡಗಿ ವಿದ್ಯುತ್ ಸ್ಥಾವರದಿಂದ ಸ್ಥಳಿಕರಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲು ಸರ್ಕಾರ ಉದ್ದೇಶಿಸಿದೆ ?

## ವಿದ್ಯುತ್ ಪೂರೈಕೆ ಹಾಗೂ ಉತ್ಪಾದನೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧೧(೪೮೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿದ್ಯುತ್ ಪೂರೈಕೆ ಹಾಗೂ ಉತ್ಪಾದನೆ ತೃಪ್ತಿದಾಯಕವಾಗಿದೆಯೇ ;

(ಆ) ಕಡಿಮೆ ಓಲ್ಟೇಜಿನಿಂದ ಟ್ರಾನ್ಸ್‌ಫಾರಂಗಳು ಪದೇ ಪದೇ ಸುಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಇ) ಟ್ರಾನ್ಸ್‌ಫಾರಂಗಳು ಸುಟ್ಟಾಗ ರೈತರು ಅದನ್ನು ಬದಲಿಸಿ ಬೇರೆ ಟ್ರಾನ್ಸ್‌ಫಾರಂನ್ನು ಪಡೆಯಲು ಗರಿಷ್ಠ ಮೊತ್ತವನ್ನು ಕೆ.ಇ.ಬಿ. ಸಿಬ್ಬಂದಿಗೆ ಕೊಡಬೇಕಾಗಿರುವ ಕುರಿತ ಆರೋಪ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಬಗ್ಗೆ ಸರ್ಕಾರದ ನಿಲುವೇನು :

(ಈ) ಟ್ರಾನ್ಸ್‌ಫಾರಂಗಳು ಸುಟ್ಟಾಗ ರೈತರಿಗೆ ಎಷ್ಟು ಕಾಲಿಮಿತಿಯೊಳಗೆ ಬದಲಾಯಿಸಿ ಟ್ರಾನ್ಸ್‌ಫಾರಂಗಳನ್ನು ನೀಡಲಾಗುತ್ತಿದೆ ; ಇದಕ್ಕೆ ಸರ್ಕಾರದ ಸೂಕ್ತ ಕ್ರಮಗಳೇನು ?

## ಸೌರಶಕ್ತಿ ವಿದ್ಯುತ್ ಉತ್ಪಾದನೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧೨(೪೮೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸೌರಶಕ್ತಿ ವಿದ್ಯುತ್ ಉತ್ಪಾದನೆಗೆ ಸೂಕ್ತ ಜಿಲ್ಲೆಗಳನ್ನು ಸರ್ಕಾರ ಗುರುತಿಸಿದೆಯೇ ; ಗುರುತಿಸಿದ್ದರೆ ಅವುಗಳ ಯಾವುವು ; (ವಿವರ ನೀಡುವುದು)

(ಆ) ಹಾಗಾದರೆ, ವಿಜಯಪುರ–ಬಾಗಲಕೋಟೆ ಕಲಬುರಗಿ, ರಾಯಚೂರು ಬಳ್ಳಾರಿ ಜಿಲ್ಲೆಗಳು ೪೩–೪೪ ಡಿಗ್ರಿ ತಾಪಮಾನದ ಹೆಚ್ಚು ಬಂಜರು ಭೂಮಿಯುಳ್ಳ ಪ್ರದೇಶಗಳೆಂದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ಈ ಪ್ರದೇಶಗಳಲ್ಲಿ ಸೌರಶಕ್ತಿ–ವಿದ್ಯುತ್ ಉತ್ಪಾದನೆಗೆ ಸರ್ಕಾರವು ಯಾವ ಯಾವ ಕ್ರಮ ಕೈಗೊಂಡಿದೆ ಎಂಬುದರ ಬಗ್ಗೆ ವಿವರ ನೀಡುವುದು ;

(ಈ) ಸೌರಶಕ್ತಿ ವಿದ್ಯುತ್ ಉತ್ಪಾದನೆಗೆ ಬಂಜರು ಭೂಮಿಯುಳ್ಳ ರೈತರಿಗೆ, ಸಹಕಾರಿ ಸಂಘಗಳಿಗೆ ಖಾಸಗಿಯವರಿಗೆ, ಪ್ರೋತ್ಸಾಹ ಕೊಡುವಂತಹ ಯಾವುದಾದರೂ ಯೋಜನೆಯನ್ನು ಸರ್ಕಾರವು ಹಾಕಿಕೊಂಡಿದೆಯೇ ; ಹಾಕಿಕೊಂಡಿದ್ದರೆ ಯೋಜನೆ ಯಾವುದು ? (ವಿವರ ನೀಡುವುದು)

## ಪಶು ಆಸ್ಪತ್ರೆಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧೩(೫೧೮) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯಲ್ಲಿರುವ ಪಶು ಆಸ್ಪತ್ರೆಗಳ ಸಂಖ್ಯೆ ಎಷ್ಟು ;

(ಆ) ಈ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ಜಿಲ್ಲೆಗಳಲ್ಲಿ ಇನ್ನು ಹೆಚ್ಚಿನ ಪಶು ಆಸ್ಪತ್ರೆಗಳ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದರೆ, ಪಶು ಆಸ್ಪತ್ರೆ ಪ್ರಾರಂಭಿಸಲು ಸರ್ಕಾರದ ಮುಂದಿರುವ ಕ್ರಮಗಳೇನು ?

## ರಾಯಚೂರು ಜಿಲ್ಲೆಗೆ ನಿರಂತರ ವಿದ್ಯುತ್ ಸರಬರಾಜು ಮಾಡುವ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೧೪(೬೮೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಯಾವುದಾದರೂ ಜಿಲ್ಲೆಗೆ ನಿರಂತರ ವಿದ್ಯುತ್ (ದಿನದ ೨೪ ಘಂಟೆ) ಸರಬರಾಜು ಮಾಡುವ ಯೋಜನೆ ಜಾರಿಯಲ್ಲಿದೆಯೇ ;

(ಆ) ರಾಯಚೂರು ಜಿಲ್ಲೆಗೆ ದಿನದ ೨೪ ಘಂಟೆ ವಿದ್ಯುತ್ ಸರಬರಾಜು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ನಿರಂತರ ವಿದ್ಯುತ್ ಸರಬರಾಜು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ಜಿಲ್ಲೆಯ ಕಾಡ್ಲೂರು ಮತ್ತು ಮೌನ್ವಿ ತಾಲ್ಲೂಕಿನ ಪಡಕಮದೊಡ್ಡಿ, ಹರವಿ ಹಾಗೂ ಅಡವಿ ಅಮರೇಶ್ವರನಲ್ಲಿ ೧೧೦/೧೧ K.V ಸ್ಟೇಶನ್‌ಗಳು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## SHDP ಯೋಜನೆಯ ಮುಖಾಂತರ ರಾಯಚೂರು ಜಿಲ್ಲೆಗೆ ಮಂಜೂರಾತಿಯಾಗಿರುವ ರಸ್ತೆಗಳ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೧೫(೬೭೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) SHDP ಯೋಜನೆಯ ಅಡಿಯಲ್ಲಿ ರಾಯಚೂರು ಜಿಲ್ಲೆಗೆ ೨೦೧೫–೧೬ನೇ ಸಾಲಿನಲ್ಲಿ ಒಟ್ಟು ಎಷ್ಟು ಕಿಲೋ ಮೀಟರ್ (K.M) ರಸ್ತೆಗಳು ಮಂಜೂರಾತಿಯಾಗಿದೆ ;

(ಆ) ಮಂಜೂರಾತಿಯಾಗಿರುವ ರಸ್ತೆಗಳ ಕಾಮಗಾರಿಯನ್ನು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ರಾಯಚೂರಿನಿಂದ ಹುನಗುಂದ SH–೨೦, ಹಾಗೂ ಕಲ್ಮಲಾ ಕ್ರಾಸ್‌ನಿಂದ ಬುದಿಗುಂಪ SH–೨೩, ಈ ಎರಡು ರಸ್ತೆಗಳನ್ನು NH ರಸ್ತೆಗಳಾಗಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ಜಿಲ್ಲೆಯಲ್ಲಿರುವ ಕೃಷಿ ವಿಶ್ವವಿದ್ಯಾಲಯದ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೧೬(೬೮೦) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೇ:–

ರಾಯಚೂರಿನಲ್ಲಿರುವ ಕೃಷಿ ವಿಶ್ವವಿದ್ಯಾಲಯಕ್ಕೆ ೨೦೧೫–೧೬ನೇ ಸಾಲಿನಲ್ಲಿ ವಿವಿಧ ಯೋಜನೆಗಳ ಮುಖಾಂತರ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನ ಎಷ್ಟು ?

## ಸೌರ ವಿದ್ಯುತ್ ಉತ್ಪಾದನೆ ಬಗ್ಗೆ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೫೧೭(೬೬೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸೌರ ವಿದ್ಯುತ್ ಉತ್ಪಾದನೆ ಸಂಬಂಧ ಪಾವಗಡದಲ್ಲಿ ರೈತರಿಂದ ಸ್ವಾಧೀನ ಪಡಿಸಿಕೊಂಡ ಒಂದು ಎಕರೆ ಜಮೀನಿಗೆ ಒಂದು ವರ್ಷಕ್ಕೆ ನೀಡುವ ಗುತ್ತಿಗೆ ಹಣ ಎಷ್ಟು ;

(ಆ) ಸೌರ ವಿದ್ಯುತ್ ಯೋಜನೆಯಡಿ ಪಿ.ಪಿ.ಎ. ಪಡೆದ ರೈತರು ಒಂದು ಮೆಗಾವ್ಯಾಟ್ ಸೌರ ವಿದ್ಯುತ್ ಉತ್ಪಾದಿಸಲು ಎಷ್ಟು ಎಕರೆ ಜಮೀನಿಗೆ, ಪೆನಲ್ ಬೋರ್ಡ್‌ಗಳನ್ನು ಅಳವಡಿಸಬೇಕು; (ಸಂಪೂರ್ಣ ತಾಂತ್ರಿಕ ವಿವರದೊಂದಿಗೆ ಮಾಹಿತಿ ಕೊಡುವುದು)

(ಇ) ಸೌರ ವಿದ್ಯುತ್ ಯೋಜನೆಯಡಿ ೧ ಮೆಗಾವ್ಯಾಟ್‌ನಿಂದ ೧ ದಿನ ಅಥವಾ ೧ ತಿಂಗಳಿಗೆ ಎಷ್ಟು ಯೂನಿಟ್ ವಿದ್ಯುತ್ ಉತ್ಪಾದಿಸಬಹುದು ? (ವಿವರವಾದ ಮಾಹಿತಿ ಕೊಡುವುದು)

## ಪುರಸಭೆಗಳಲ್ಲಿ ಕೆಲಸ ಮಾಡುತ್ತಿರುವ ಗ್ರಾಮ ಪಂಚಾಯಿತಿ ನೌಕರರ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧೮(೬೨೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅನೇಕ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಯಲ್ಲಿ ವಿಲೀನಗೊಳಿಸಿ ಪುರಸಭೆಗಳನ್ನಾಗಿ ಪರಿವರ್ತನೆ ಮೇಲ್ದರ್ಜೆಗೇರಿಸಿರುವ ಪ್ರಕರಣಗಳೆಷ್ಟು ;

(ಆ) ಪುರಸಭೆಗಳಲ್ಲಿ ಕೆಲಸ ಮಾಡುತ್ತಿರುವ ಗ್ರಾಮ ಪಂಚಾಯಿತಿ ಸರ್ಕಾರ ಸೇವಾ ಭದ್ರತೆ ಹಾಗೂ ವೇತನದ ಬಗ್ಗೆ ಸರ್ಕಾರದಿಂದ ಯಾವುದೇ ಆದೇಶ ಹೊರಡದಿರುವುದರಿಂದ ಈ ನೌಕರರಿಗೆ ವೇತನ ದೊರೆಯದೆ ಕಷ್ಟಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಪುರಸಭೆಯಲ್ಲಿ ಕೆಲಸ ಮಾಡುತ್ತಿರುವ ಈ ಗ್ರಾಮ ಪಂಚಾಯಿತಿ ನೌಕರರಿಗೆ ಸೇವಾ ಭದ್ರತೆ ಹಾಗೂ ವೇತನವನ್ನು ದೊರಕಿಸಿಕೊಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಕ್ರಮ ಕೈಗೊಂಡಿದ್ದರೆ ಎಷ್ಟು ದಿವಸಗಳಲ್ಲಿ ಆದೇಶ ಹೊರಡಿಸಲಾಗುತ್ತದೆ ?

## ಕೃಷಿ ಅಭಿವೃದ್ಧಿ.

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೯೯(೬೨೬) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಇಲಾಖೆಯಿಂದ ರಾಜ್ಯದಲ್ಲಿರುವ ರೈತರಿಗೆ ಕೃಷಿ ಅಭಿವೃದ್ಧಿಗಾಗಿ ಇರುವ ಯೋಜನೆಗಳು ಯಾವುವು ; ಇದಕ್ಕಾಗಿ ಎಷ್ಟು ಹಣ ಮೀಸಲಾಗಿಡಲಾಗಿದೆ ;

(ಆ) ಕೃಷಿ ಯಂತ್ರೋಪಕರಣ ಹಾಗೂ ವಾಹನ ಖರೀದಿಗೆ ನೀಡಲಾಗುವ ಸಹಾಯಧನ ಎಷ್ಟು ;

(ಇ) ಕಳೆದ ೨ ವರ್ಷಗಳಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಎಷ್ಟು ಜನರಿಗೆ ಈ ಸಹಾಯಧನ ನೀಡಲಾಗಿದೆ ;

(ಈ) ಸಹಾಯಧನ ನೀಡುವಾಗ ಫಲಾನುಭವಿಗಳನ್ನು ಆಯ್ಕೆ ಮಾಡಲು ಅನುಸರಿಸುತ್ತಿರುವ ಮಾನದಂಡಗಳಾವುವು ?

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪಶುವೈದ್ಯಕೀಯ ಕಾಲೇಜು ಪ್ರಾರಂಭಿಸುವ ಬಗ್ಗೆ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೫೨೦(೪೯) ಮಾನ್ಯ  ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪಶುವೈದ್ಯಕೀಯ ಕಾಲೇಜು ಪ್ರಾರಂಭಿಸಬೇಕೆಂಬ ಪ್ರಸ್ತಾವನೆಯು ಯಾವ ಹಂತದಲ್ಲಿದೆ ; ಎಲ್ಲಿ ಮತ್ತು ಯಾವಾಗ ಈ ಪ್ರಸ್ತಾವನೆ ಕಾರ್ಯಗತಗೊಳ್ಳುವುದು ;

(ಆ) ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಪಶುವೈದ್ಯಕೀಯ ಆಸ್ಪತ್ರೆಗಳಲ್ಲಿ ಮೂಲಭೂತ ಸೌಕರ್ಯದ ಕೊರತೆ ಮತ್ತು ವೈದ್ಯರು ಇಲ್ಲದೇ ಜಾನುವಾರುಗಳು ಮೃತಪಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಕೈಗೊಂಡ ಕ್ರಮಗಳೇನು ;

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಒಟ್ಟು ಪಶುವೈದ್ಯಕೀಯ ಆಸ್ಪತ್ರೆಗಳೆಷ್ಟು ; ಪಶುವೈದ್ಯಕೀಯ ಡಾಕ್ಟರ್‌ಗಳ ಸಂಖ್ಯೆ ಎಷ್ಟು ; ಹಾಲಿ ಇರುವ ಹುದ್ದೆಗಳೆಷ್ಟು ; ಖಾಲಿ ಇರುವ ಹುದ್ದೆ ಎಷ್ಟು ; ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ರಾಜ್ಯದಲ್ಲಿ ಪಶುವೈದ್ಯಕೀಯ ಕಾಲೇಜುಗಳಲ್ಲಿ ಎಷ್ಟು ವೈದ್ಯರು ಪದವಿಯನ್ನು ಪಡೆಯುತ್ತಿದ್ದಾರೆ ; ರಾಜ್ಯದಲ್ಲಿ ಪಶುವೈದ್ಯಕೀಯ ವೈದ್ಯರುಗಳ ಕೊರತೆ ಇದೆಯೇ ? (ಕಾಲೇಜುವಾರು ವಿವರ ನೀಡುವುದು)

## ಸುಳ್ಯ ತಾಲ್ಲೂಕಿನಲ್ಲಿ ವಿದ್ಯುತ್ ಸಮಸ್ಯೆಗಳನ್ನು ನಿವಾರಿಸುವ ಬಗ್ಗೆ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೫೨೧(೪೯೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸುಳ್ಯ ತಾಲ್ಲೂಕಿನಲ್ಲಿ ವಿದ್ಯುತ್ ಸಮಸ್ಯೆಗಳನ್ನು ನಿವಾರಿಸಲು ೧೧೦ಕೆ.ವಿ. ಸಿಂಗಲ್ ಸರ್ಕ್ಯೂಟ್ ಅಳವಡಿಸುವ ಬಗ್ಗೆ ಇಲಾಖೆಯು ಕೈಗೊಂಡಿರುವ ಕ್ರಮಗಳಾವುವು ; ಇದು ಯಾವ ಹಂತದಲ್ಲಿದೆ ; ಈ ಪ್ರಸ್ತಾವನೆಯನ್ನು ಎಂದು ಪ್ರಸ್ತಾಪಿಸಲಾಗಿತ್ತು ;

(ಆ) ಸುಳ್ಯ ತಾಲ್ಲೂಕಿನಲ್ಲಿ ೨೦೧೩–೧೪ ರಿಂದ ೨೦೧೫–೧೬ ರಲ್ಲಿ ಬಳಕೆಯಾಗಿರುವ ವಿದ್ಯುತ್ ಪ್ರಮಾಣ ಎಷ್ಟು ; ಪ್ರಸ್ತುತ ಇರುವ ಬೇಡಿಕೆ ಎಷ್ಟು ;

(ಇ) ಸುಳ್ಯ ತಾಲ್ಲೂಕಿನಲ್ಲಿ ವಿದ್ಯುತ್ ಸಮಸ್ಯೆಯನ್ನು ಪರಿಹರಿಸಲು ಇಲಾಖೆ ಕ್ರಮಕೈಗೊಳ್ಳದೇ ಇರಲು ಕಾರಣಗಳೇನು ;

(ಈ) ಕುಂಬ್ರದಿಂದ ಸುಳ್ಯ ತಾಲ್ಲೂಕುವರೆಗೆ ವಯರ್ ರಿಪ್ಲೇಸ್‌ಮೆಂಟ್ ಮಾಡಲು ಯಾವಾಗ ಟೆಂಡರ್ ಕರೆಯಲಾಗಿದೆ ; ಈ ಕಾಮಗಾರಿಗಳನ್ನು ಪೂರ್ಣಗೊಳಿಸಲು ನೀಡಿದ ಕಾಲಾವಕಾಶ ಎಷ್ಟು ; ಟೆಂಡರ್ ಮೊತ್ತ ಎಷ್ಟು ; ವಿಳಂಬಕ್ಕೆ ಕಾರಣವೇನು ; ಈ ನಿಟ್ಟಿನಲ್ಲಿ ಸರ್ಕಾರ ಏನು ಕ್ರಮಕೈಗೊಂಡಿದೆ ಮೇಲಿನ ಟೆಂಡರ್‌ಗಳನ್ನು ಯಾವ ಉದ್ದೇಶಕ್ಕಾಗಿ ಕರೆಯಲಾಗಿತ್ತು ; (ವಿವರ ನೀಡುವುದು)

(ಉ) ದಿನಾಂಕ: ೦೨–೦೩–೨೦೧೬ರಂದು ರಾಜಕೀಯ ಪಕ್ಷದವರು ಸುಳ್ಯದ ವಿದ್ಯುಚ್ಛಕ್ತಿ ಇಲಾಖೆಯ ಆವರಣದೊಳಗಡೆ ಶಾಮಿಯಾನ ಹಾಕಿ ಪ್ರತಿಭಟನೆ ಮಾಡುವುದು ಕಾನೂನು ಬಾಹಿರವೇ ಆಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ಮಂಗಳೂರು ನಗರದಿಂದ ವಿಮಾನ ನಿಲ್ದಾಣಕ್ಕೆ ಹೋಗುವ ಸಂಪರ್ಕ ರಸ್ತೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೩೨೨(೪೯೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ನಗರದಿಂದ ವಿಮಾನ ನಿಲ್ದಾಣಕ್ಕೆ ಹೋಗುವ ಸಂಪರ್ಕ ರಸ್ತೆಯ ಮರಕಡದಿಂದ ವಿಮಾನ ನಿಲ್ದಾಣದವರೆಗೆ ರಸ್ತೆಯನ್ನು ಅಭಿವೃದ್ಧಿ ಪಡಿಸದೇ ಇರಲು ಕಾರಣಗಳೇನು ;

(ಆ) ಈ ರಸ್ತೆ ಅಭಿವೃದ್ಧಿಗಾಗಿ ಅಪೆಂಡಿಕ್ಸ್–ಇ ನಲ್ಲಿ ಹಣವನ್ನು ಮೀಲಸಿರಿಸಿದ್ದರೂ ಕಾಮಗಾರಿ ಪ್ರಾರಂಭಗೊಳ್ಳದೇ ಇರಲು ಕಾರಣಗಳೇನು ;

(ಇ) ಮರವೂರು ಸೇತುವೆಯನ್ನು ದ್ವಿಪಥ ರಸ್ತೆಯನ್ನಾಗಿ ಮಾರ್ಪಡಿಸಿ ಹೊಸ ಸೇತುವೆಯನ್ನಾಗಿ ಮಾರ್ಪಡಿಸಲು ತಗಲುವ ವೆಚ್ಚ ಎಷ್ಟು ; ಈ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಈ ಯೋಜನೆಯುನ್ನು ಯಾವ ಕಾಲಮಿತಿಯೊಳಗೆ ಜಾರಿಗೆ ತರಲಾಗುವುದು ? (ವಿವರ ನೀಡುವುದು)

# ‘ಕ್ರೈಸ್ತ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ’ ರಚಿಸುವ ಬಗ್ಗೆ

**ಶ್ರೀ ಐವನ್ ಡಿ’ಸೋಜಾ (ನಾಮನಿರ್ದೇಶನ ಹೊಂದಿದವರು) :–**

೫೨೩(೪೯೬)ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಅಲ್ಪಸಂಖ್ಯಾತರಲ್ಲಿ ಕ್ರೈಸ್ತರು ಶೇ.೧೬ ರಷ್ಟು ಕ್ರೈಸ್ತ ಅಲ್ಪಸಂಖ್ಯಾತರು ಇದ್ದರೂ, ‘ಕ್ರೈಸ್ತ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ’ ರಚಿಸದೇ ಇರಲು ಸರ್ಕಾರಕ್ಕೆ ಇರುವ ತೊಂದರೆಗಳೇನು ;

(ಆ) ರಾಜ್ಯದಲ್ಲಿ ಕ್ರೈಸ್ತ ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ೨೦೧೫–೧೬ರಲ್ಲಿ ಬಿಡುಗಡೆ ಮಾಡಿದ ಅನುದಾನ ಎಷ್ಟು ; ಯಾವ ಯಾವ ಉದ್ದೇಶಕ್ಕೆ ವಿತರಿಸಲಾಗಿದೆ ;

(ಇ) ಮಣಿಪಾಲದಲ್ಲಿ ಚರ್ಚ್ ದುರಸ್ಥಿಗಾಗಿ ಅರ್ಜಿಯನ್ನು ನೀಡಲಾಗಿದ್ದು, ಅದನ್ನು ತಿರಸ್ಕರಿಸಲು ಕಾರಣಗಳೇನು ; ಯಾವ ಹಂತದಲ್ಲಿ ಅರ್ಜಿಯನ್ನು ತಿರಸ್ಕರಿಸಲಾಗಿದೆ ; (ಅರ್ಜಿ ಮತ್ತು ದಾಖಲೆ ಸಮೇತ ಸಂಪೂರ್ಣ ವಿವರ ಒದಗಿಸುವುದು)

(ಈ) ಕ್ರೈಸ್ತ ಸಮುದಾಯದ ಆಶ್ರಮಗಳಿಗೆ ಮತ್ತು ವಿದ್ಯಾರ್ಥಿ ಹಾಸ್ಟೆಲ್ ವ್ಯವಸ್ಥೆಯನ್ನು ಒದಗಿಸಲು ಇಲಾಖೆ ಮುಂದೆ ಏನಾದರೂ ಕಾರ್ಯಕ್ರಮಗಳಿದೆಯೇ ; (ವಿವರ ನೀಡುವುದು)

(ಉ) ೨೦೧೫–೧೬ರಲ್ಲಿ ರಾಜ್ಯದಲ್ಲಿ ಕ್ರೈಸ್ತ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಕ್ರೈಸ್ತ ಸಮುದಾಯದ ಫಲಾನುಭವಿಗಳಿಗೆ ವಿವಿಧ ಸೌಲಭ್ಯ ಒದಗಿಸಲಾಗಿದೆಯೇ ; ನೀಡಿದ ಮೊತ್ತ ಎಷ್ಟು ; ವಿನಿಯೋಗಿಸಿದ ಮೊತ್ತ ಎಷ್ಟು ? (ವಿವರ ನೀಡುವುದು)

## ರಬ್ಬರ್ ಬೆಳೆಗಾರರಿಗೆ ಕೇರಳ ಮಾದರಿಯಪ್ಯಾಕೇಜ್ ಒದಗಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೫೨೪(೪೯೮) ಮಾನ್ಯ ಕೃಷಿ  ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಬ್ಬರ್ ಬೆಳೆಗಾರರಿಗೆ ಕೇರಳ ಮಾದರಿಯ ಪ್ಯಾಕೇಜ್ ಒದಗಿಸುವ ಬಗ್ಗೆ ಪರಿಶೀಲಿಸಲು ನೇಮಿಸಿರುವ ಸಮಿತಿಯ ವರದಿಯನ್ನು ನೀಡಲಾಗುವುದು ಯಾವಾಗ ನೀಡಿದ್ದರೆ ವರದಿಯ ಪ್ರತಿಯನ್ನು ಒದಗಿಸುವುದು ;

(ಆ) ರಬ್ಬರ್ ಬೆಳೆಯಲ್ಲಿ ಬೆಲೆ ಕುಸಿತಗೊಂಡು ಮೂರು ಮಂದಿ ರೈತರು ಆತ್ಮಹತ್ಯೆ ಮಾಡಿಕೊಂಡಿರುವವರಿಗೆ ಪರಿಹಾರ ಒದಗಿಸಲಾಗಿದೆಯೇ ಒದಗಿಸಿದ್ದರೆ ಯಾವ ಮಾದರಿಯಲ್ಲಿ ಪರಿಹಾರ ನೀಡಲಾಗಿದೆ ; (ವಿವರ ನೀಡುವುದು)

(ಇ) ರಬ್ಬರ್ ಬೆಳೆಯ ಬೆಲೆ ಕುಸಿತಗೊಂಡಾಗ ಬೆಲೆ ನಿಗದಿಗೊಳಿಸಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆಯೇ ? (ವಿವರ ನೀಡುವುದು)

## ರಾಷ್ಟ್ರೀಯ ಹೆದ್ದಾರಿಗಳಲ್ಲಿನ ಅಪಘಾತಗಳು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೫೨೫ (೭೩೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಷ್ಟ್ರೀಯ ಹೆದ್ದಾರಿ ೪೮ರ ಶಿರಾಡಿ ಘಾಟ್ ರಸ್ತೆಯ ತಿರವುಗಳಲ್ಲಿ ನಿರಂತರವಾಗಿ ಅನಿಲ ಸಾಗಣೆ ಮಾಡುವ ಬುಲೆಟ್ ಟ್ಯಾಂಕರ್‌ಗಳು

ಖಾಸಗಿ ವಾಹಗಳು ಅಪಘಾತಕ್ಕೀಡಾಗಿ ಸಾವು ನೋವು ಸಂಭವಿಸುವುದು ; ವಾಹನಗಳ ಸಂಚಾರ ಅಸ್ತವ್ಯಸ್ತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಾವು ನೋವುಗಳಿಗೆ ತುತ್ತಾದವರ ಸಂಚಾರ ವ್ಯತ್ಯಯದಿಂದ ಅನಿವಾರ್ಯವಾಗಿ ಕಾಲವ್ಯಯ ಮಾಡುವ ಪ್ರಯಾಣಿಕರ ಬವಣೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ರಸ್ತೆಗಳಲ್ಲಿನ ಅಪಘಾತಗಳಿಗೆ ಸಾವು ನೋವು ಮತ್ತು ಬವಣೆಗಳನ್ನು ಕೊನೆಗಾಣಿಸಲು ಸರ್ಕಾರ ಕೈಗೊಂಡಿರುವ ಅಥವಾ ಕೈಗೊಳ್ಳುವ ಕ್ರಮಗಳಾವುವು ?

## ನಂದಿ ಗಿರಿಧಾಮದಲ್ಲಿ ಶುದ್ಧ ಕುಡಿಯುವ ನೀರು ಸೇರಿದಂತೆ ಇತರ ಮೂಲಭೂತ ಸೌಲಭ್ಯಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೫೨೬ (೬೬೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಂತಾರಾಷ್ಟ್ರೀಯ ಮಟ್ಟದಲ್ಲಿ ಖ್ಯಾತಿಗಳಿಸಿರುವ ನಂದಿ ಗಿರಿಧಾಮದಲ್ಲಿ ಶುದ್ಧ ಕುಡಿಯುವ ನೀರು ಸೇರಿದಂತೆ ಮೂಲಭೂತ ಸೌಲಭ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಗಿರಿಧಾಮಕ್ಕೆ ರಾಜ್ಯದಿಂದ ಮಾತ್ರವಲ್ಲದೆ ಹೊರ ರಾಜ್ಯ ಮತ್ತು ಹೊರ ದೇಶಗಳಿಂದಲೂ ಸಾವಿರಾರು ಪ್ರವಾಸಿಗರು ಬರುತ್ತಿದ್ದು, ಇದರ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ತೋಟಗಾರಿಕೆ ಇಲಾಖೆಯಿಂದ ಈಗ ಅಲ್ಲಿ ಸೈಕಲ್ ವಿಹಾರವನ್ನೂ ಪ್ರಾರಂಭ ಮಾಡಿದ್ದು, ರಸ್ತೆಗಳು ಈ ಸೈಕಲ್ ವಿಹಾರಕ್ಕೂ ಉಪಯೋಗವಾದ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ವಿಷಯಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರು, ಪ್ರವಾಸಿಗರು ಸೇರಿದಂತೆ ಸ್ಥಳೀಯರು ಹಲವಾರು ಬಾರಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ನೀಡಿದರೂ ಯಾವ ಪ್ರಯೋಜನವಾಗದಿರುವ ಬಗ್ಗೆ ಸರ್ಕಾರ ಏನು ಕ್ರಮಕೈಗೊಂಡಿದೆ ?

## ಶಿರಾಡಿ ಘಾಟ್ ರಸ್ತೆಯನ್ನು ಕಾಂಕ್ರೀಟ್ ರಸ್ತೆಯನ್ನಾಗಿ ಪರಿವರ್ತಿಸಲು ವಿಳಂಬವಾಗುತ್ತಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೫೨೭ (೬೬೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆಯ ಮುಖಾಂತರ ಕರಾವಳಿ ಜಿಲ್ಲೆಗಳನ್ನು ಸಂಪರ್ಕಿಸುವ ಪ್ರಮುಖ ರಾಷ್ಟ್ರೀಯ ಹೆದ್ದಾರಿ ಹಾದು ಹೋಗುವ ಶಿರಾಡಿ ಘಾಟ್‌ನ ದುರಸ್ತಿಗೆ ಈವರೆವಿಗೆ ಖರ್ಚಾಗಿರುವ ಹಣ ಎಷ್ಟು; ದುರಸ್ತಿಯ ನಂತರ ಎಷ್ಟು ಕಿ.ಮೀ ರಸ್ತೆ ಸಂಚಾರಕ್ಕೆ ಯೋಗ್ಯವಾಗಿದೆಯೇ ;

(ಆ) ಶಿರಾಡಿ ಘಾಟ್‌ನ ಒಂದು ಹಂತದ ರಸ್ತೆ ಮಾತ್ರವೇ ಕಾಂಕ್ರೀಟ್ ಆಗಿದ್ದು ಉಳಿದ ಭಾಗದ ರಸ್ತೆಯನ್ನು ಯಾವಾಗ ಕಾಂಕ್ರೀಟ್ ಮಾಡಲಾಗುವುದು ;

(ಇ) ಮಳೆಗಾಲದ ಮೊದಲು ಸದರಿ ಉಳಿಕೆ ರಸ್ತೆಯನ್ನು ಕಾಂಕ್ರೀಟ್ ರಸ್ತೆಯನ್ನಾಗಿ ಮಾಡಲು ಸರ್ಕಾರ ಯಾವ ಕ್ರಮಕೈಗೊಂಡಿದೆ ;

(ಈ) ಉಳಿಕೆ ರಸ್ತೆಯನ್ನು ಕಾಂಕ್ರೀಟ್ ರಸ್ತೆಯನ್ನಾಗಿ ಮಾಡಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ವಿಳಂಬಕ್ಕೆ ಕಾರಣಗಳೇನು ?

## ರಾಜ್ಯದಲ್ಲಿರುವ ವಿದ್ಯುತ್ ಬೇಡಿಕೆಯ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೫೨೮ (೬೭೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಒಟ್ಟು ವಿದ್ಯುತ್ ಬೇಡಿಕೆಯ ಪ್ರಮಾಣವೆಷ್ಟು ;

(ಆ) ಇದರಲ್ಲಿ ಜಲವಿದ್ಯುತ್, ವಿಂಡ್ ಪವರ್, ಥರ್ಮಲ್ ಪವರ್ ಮತ್ತು ಸೌರ ಶಕ್ತಿಯಿಂದ ಉತ್ಪಾದಿಸುವ ವಿದ್ಯುತ್ ಪ್ರಮಾಣ ಎಷ್ಟು ;

(ಇ) ರಾಜ್ಯದಲ್ಲಿ ಸೌರಶಕ್ತಿಯ ಉತ್ಪಾದನೆಯನ್ನು ಹೆಚ್ಚಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಈ) ಸೌರಶಕ್ತಿಯ ಉತ್ಪಾದನೆ ಮತ್ತು ಬಳಕೆಗಾಗಿ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯ ೩ನೇ ಹಂತದಲ್ಲಿ ರಸ್ತೆಗಳನ್ನು ದ್ವಿ–ಪಥ ರಸ್ತೆಗಳನ್ನಾಗಿ ಅಭಿವೃದ್ಧಿಪಡಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೫೨೯ (೬೬೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯ ೩ನೇ ಹಂತದಲ್ಲಿ ಎಷ್ಟು ಕಿ.ಮೀ. ಉದ್ದದ ರಸ್ತೆಗಳನ್ನು ದ್ವಿ–ಪಥ ರಸ್ತೆಗಳನ್ನಾಗಿ ಅಭಿವೃದ್ಧಿಪಡಿಸಲು ತೀರ್ಮಾನಿಸಲಾಗಿದೆ ;

(ಆ) ಈ ರಸ್ತೆ ಕಾಮಗಾರಿಗಳನ್ನು ಎಷ್ಟು ಪ್ಯಾಕೇಜ್‌ಗಳನ್ನಾಗಿ ವಿಂಗಡಿಸಲಾಗಿದೆ; ಪ್ರತಿ ಪ್ಯಾಕೇಜಿಗೆ ಖರ್ಚಾಗುವ ಹಣ ಎಷ್ಟು ; (ಮಾಹಿತಿಯನ್ನು ಒದಗಿಸುವುದು)

(ಇ) ಈ ಯೋಜನೆಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ?

## ತೆಂಗು ಬೆಳೆ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೦ (೬೩೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ತೆಂಗು ಬೆಳೆಯುವ ಪ್ರದೇಶ ಎಷ್ಟು ಹೆಕ್ಟರ್ ಇದೆ ;

(ಆ) ದೇಶದ ಒಟ್ಟು ತೆಂಗು ಉತ್ಪಾದನೆಯಲ್ಲಿ ರಾಜ್ಯದ ಸ್ಥಾನ ಯಾವುದು ; ಎಷ್ಟು ಪಾಲು ;

(ಇ) ತೆಂಗು ಬೆಳೆಗಾರರ ಅಭಿವೃದ್ಧಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಶಿರಾಡಿಘಾಟ್ ಸುರಂಗ ಮಾರ್ಗ ನಿರ್ಮಾಣದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೧ (೬೨೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರಾವಳಿ ಜಿಲ್ಲೆ ಮತ್ತು ರಾಜ್ಯದ ರಾಜಧಾನಿಯ ನಡುವಿನ ಶಿರಾಡಿಘಾಟ್ ಸುರಂಗ ಮಾರ್ಗ ನಿರ್ಮಾಣದ ಪ್ರಸ್ತಾವನೆ ಸರ್ಕಾರದ ಮುಂದಿರುವುದು ನಿಜವೇ ; (ಹೌದಾದಲ್ಲಿ ಪ್ರಸ್ತಾವನೆ ಯಾವ ಹಂತದಲ್ಲಿದೆ, ವಿವರ ನೀಡುವುದು)

(ಆ) ಶಿರಾಡಿಘಾಟ್ ಸುರಂಗ ಮಾರ್ಗ ನಿರ್ಮಾಣದ ಸಮೀಕ್ಷಾ ವರದಿ ತಯಾರಿಸಲಾಗಿದೆಯೇ ; (ಹೌದಾದಲ್ಲಿ ಸಂಪೂರ್ಣ ವರದಿ ಹಾಗೂ ಸಮೀಕ್ಷೆಗೆ ಖರ್ಚಾದ ಅನುದಾನದ ಮತ್ತು ಸಂಸ್ಥೆಯ ವಿವರ ನೀಡುವುದು)

(ಇ) ಶಿರಾಡಿಘಾಟ್ ಸುರಂಗ ಮಾರ್ಗ ನಿರ್ಮಾಣದಿಂದ ರಾಜ್ಯದ ರಾಜಧಾನಿ ಮತ್ತು ಕರಾವಳಿ ಜಿಲ್ಲೆಗಳ ನಡುವಿನ ಪ್ರಯಾಣದ ಅವಧಿ ಕಡಿಮೆಯಾಗುವುದರೊಂದಿಗೆ, ಪ್ರವಾಸೋದ್ಯಮ ಮತ್ತು ವಾಣಿಜ್ಯ ಅಭಿವೃದ್ಧಿಗೆ ಪೂರಕವಾಗುವ ಅಂಶ ಸರ್ಕಾರದ ಗಮನಕ್ಕಿದೆಯೇ ;

(ಈ) ಶಿರಾಡಿಘಾಟ್ ಸುರಂಗ ಮಾರ್ಗ ನಿರ್ಮಾಣದ ಯೋಜನೆಯನ್ನು ಸರ್ಕಾರ ಯಾವಾಗ ಕೈಗೆತ್ತಿಕೊಳ್ಳಲಿದೆ ?

## ತೆಂಗಿನ ಉತ್ಪನ್ನಗಳಿಗೆ ಪ್ರೋತ್ಸಾಹ ಕ್ರಮಗಳ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೨ (೬೩೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತೆಂಗಿನ ಯಾವ ಉತ್ಪನ್ನಗಳಿಗೆ ಸರ್ಕಾರ ಪ್ರೋತ್ಸಾಹ ಕ್ರಮಗಳನ್ನು ರೂಪಿಸಿದೆ ;

(ಆ) ಪಕ್ಕದ ಕೇರಳ, ತಮಿಳುನಾಡು ಹಾಗೂ ಗೋವಾ ರಾಜ್ಯಗಳಲ್ಲಿ ನೀರಾ ಸಕ್ಕರೆ, ನೀರಾ ಬೆಲ್ಲ ತಯಾರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರಾಜ್ಯದ ತೆಂಗು ಬೆಳೆಗಾರರಿಗೂ, ತೆಂಗಿನ ಮೌಲ್ಯಾಧಾರಿತ ಉತ್ಪನ್ನಗಳನ್ನು ತಯಾರಿಸಲು ಅನುಕೂಲವಾಗುವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಮೇಲ್ದರ್ಜೆಗೇರಿಸುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೩ (೬೬೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಹೆದ್ದಾರಿಗಳಲ್ಲಿನ ವಾಹನ ದಟ್ಟಣೆಯನ್ನು ಕಡಿಮೆ ಮಾಡುವ ಸಲುವಾಗಿ ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಪರಿವರ್ತಿಸುವ ವಿಚಾರ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಯಾವ್ಯಾವ ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಮೇಲ್ದರ್ಜೆಗೇರಿಸಲಾಗುವುದು ; (ವಿವರ ನೀಡುವುದು)

(ಆ) ರಾಜ್ಯ ಹೆದ್ದಾರಿಯ ಅಗಲವೆಷ್ಟು ಹಾಗೂ ರಾಷ್ಟ್ರೀಯ ಹೆದ್ದಾರಿಗಳನ್ನು ಎಷ್ಟು ಅಗಲವಾಗಿ ಮಾಡಲಾಗುವುದು ; ಈ ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಗುವುದು ; ಈ ಕಾರ್ಮಗಾರಿಗೆ ತಗಲುವ ಒಟ್ಟು ಅಂದಾಜು ವೆಚ್ಚ ಎಷ್ಟು ;

(ಇ) ಕೇಂದ್ರ ಸರ್ಕಾರಕ್ಕೆ ಕ್ರಿಯಾ ಯೋಜನೆಯನ್ನು ಸಲ್ಲಿಸಲಾಗಿದೆಯೇ? (ಸಂಪೂರ್ಣ ವಿವರ ಒದಗಿಸುವುದು)

## ರಾಜ್ಯ ಕೃಷಿ ಬೆಲೆ ಆಯೋಗದ ಶಿಫಾರಸ್ಸುಗಳನ್ನು ಶಾಸನಬದ್ಧಗೊಳಿಸುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೪ (೬೬೬) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಮ್ಮ ರಾಜ್ಯದಲ್ಲಿ ಕೃಷಿ ಬೆಲೆ ಆಯೋಗವು ಶಿಫಾರಸ್ಸು ಮಾಡಿದ ಕನಿಷ್ಠ ಬೆಂಬಲ ಬೆಲೆಯನ್ನು ಶಾಸನಬದ್ಧಗೊಳಿಸುವ ವಿಚಾರ ಸರ್ಕಾರದ ಮುಂದೆ ಇದೆಯೇ ;

(ಆ) ಹಾಗಿದ್ದಲ್ಲಿ, ಕೃಷಿ ಬೆಲೆ ಆಯೋಗವು ಯಾವ ಯಾವ ಬೆಳೆಗಳಿಗೆ ಬೆಂಬಲ ಬೆಲೆ ನೀಡಲು ಶಿಫಾರಸ್ಸು ಮಾಡಿದೆ ;

(ಇ) ಬೆಳೆಗಳಿಗೆ ಯಾವ ಆಧಾರದ ಮೇಲೆ ಬೆಂಬಲ ಬೆಲೆ ನೀಡಲು ಶಿಫಾರಸ್ಸು ಮಾಡಿರುತ್ತದೆ ;

(ಈ) ಬೆಂಬಲ ಬೆಲೆಗಿಂತ ಕಡಿಮೆ ಬೆಲೆಗೆ ಖರೀದಿಸಿದರೆ, ಖರೀದಿಸುವವರಗೆ ಯಾವ ಪ್ರಮಾಣದಲ್ಲಿ ಶಿಕ್ಷೆ ವಿಧಿಸುವಂತೆ ಶಿಫಾರಸ್ಸು ಮಾಡಿದೆ ;

(ಉ) ಈ ಆಯೋಗವು ಶಿಫಾರಸ್ಸು ಮಾಡಿರುವ ವರದಿಯನ್ನು ಯಾವಾಗ ಶಾಸನಬದ್ಧಗೊಳಿಸಲಾಗುವುದು ; ರೈತರಿಗೆ ಇದರಿಂದಾಗುವ ಅನುಕೂಲತೆಗಳು ಯಾವುವು ?

## ಬೆಳಗಾವಿ ಜಿಲ್ಲೆಯಲ್ಲಿ ಪೌರ ಕಾರ್ಮಿಕರ ಕೊರತೆ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೫ (೬೬೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ಬೈಹೊಂಗಲ, ಸೌವದತ್ತಿ, ಚಿಕ್ಕೋಡಿ, ರಾಮದುರ್ಗ, ಸಂಕೇಶ್ವರ, ಮೂಡಲಗಿ, ಅಥಣಿ ಪುರಸಭೆಗಳಲ್ಲಿ ಪೌರ ಕಾರ್ಮಿಕರ ಕೊರತೆಯಿಂದಾಗಿ ಘನತ್ಯಾಜ್ಯ ವಿಲೇವಾರಿ ಆಗದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆ ಆಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರವು ಈ ಕುರಿತು ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಈ ಪುರಸಭೆಗಳಲ್ಲಿ ಒಟ್ಟು ಮಂಜೂರು ಆಗಿರುವ ಪೌರ ಕಾರ್ಮಿಕರ ಹುದ್ದೆಗಳ ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ಮಾಹಿತಿ ನೀಡುವುದು)

(ಈ) ಖಾಲಿ ಇರುವ ಪೌರ ಕಾರ್ಮಿಕರನ್ನು ಯಾವ ಕಾಲ ಮಿತಿಯಲ್ಲಿ ಭರ್ತಿ ಮಾಡಲಾಗುವುದು ;

(ಉ) ಘನತ್ಯಾಜ್ಯ ವಿಲೇವಾರಿ ಮಾಡುವ ನಿಟ್ಟಿನಲ್ಲಿ ಸರ್ಕಾರವು ಯಾವ ಕ್ರಮ ಕೈಗೊಳ್ಳಲಿದೆ ?

## ಹೊಸ ಪುರಸಭೆ, ಪಟ್ಟಣ ಪಂಚಾಯ್ತಿಗಳಿಗೆ ಮೂಲಭೂತ ಸೌಕರ್ಯ ಒದಗಿಸುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೬ (೬೬೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶ್ರೀ ಎಸ್.ಜಿ. ನಂಜಯ್ಯನಮಠ ಅವರ ನೇತೃತ್ವದಲ್ಲಿ ಗ್ರಾಮ ಪಂಚಾಯತಿ ಪುನರ್ ವಿಂಗಡಣಾ ಸಮಿತಿಯ ಶಿಫಾರಸ್ಸಿನ ಮೇರೆಗೆ ರಾಜ್ಯದಲ್ಲಿ ಹೊಸ ಪಟ್ಟಣ ಪಂಚಾಯತಿ ಮತ್ತು ಪುರಸಭೆಗಳನ್ನು ರಚಿಸಲಾಗಿದ್ದು ಇವಕ್ಕೆ ಬೇಕಾದ ಕಾರ್ಯಾಲಯ, ಸಿಬ್ಬಂದಿ, ಪೀಠೋಪಕರಣ, ಆಡಳಿತಾತ್ಮಕ ಸೌಲಭ್ಯ ಇತರೆ ಮೂಲಭೂತ ಸೌಕರ್ಯಗಳನ್ನು ಒದಗಿಸದೇ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದರೆ, ಎಷ್ಟು ಕಾಲಮಿತಿಯಲ್ಲಿ ಮೂಲಸೌಕರ್ಯ ಒದಗಿಸಲಾಗುವುದು ;

(ಇ) ಸದರಿ ಪುರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಚುನಾವಣೆಗಳನ್ನು ಯಾವಾಗ ನಡೆಸಲಾಗುವುದು ; ಮೀಸಲಾತಿಗಳನ್ನು ಅಂತಿಮಗೊಳಿಸುವುದು ಯಾವಾಗ ; ಮೀಸಲಾತಿ ಅಂತಿಮಗೊಳಿಸಲು ಇರುವ ಮಾನದಂಡಗಳೇನು ?

## ರಸ್ತೆ ನಿರ್ಮಾಣದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೫೩೭ (೮೮೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ತುಮಕೂರು ಜಿಲ್ಲೆ, ತುರುವೇಕೆರೆ ತಾಲ್ಲೂಕಿನ ಅಬಲಕಟ್ಟೆ ಗ್ರಾಮಕ್ಕೆ ದಬ್ಬೇಘಟ್ಟ ರಸ್ತೆಯ ದೇವಿಹಳ್ಳಿ ಗೇಟ್ ಪಕ್ಕದಿಂದ ಹಾದು ಹೋಗುವ ಬಂಡಿ ರಸ್ತೆಯು ಒಟ್ಟು ಎಷ್ಟು ಕಿ.ಮೀ. ಇರುತ್ತದೆ ; ಹಾಗೂ ಇದು ಯಾವ ಯಾವ ಜಾಗದ ಮೂಲಕ ಹಾದು ಹೋಗುತ್ತಿದೆ ; (ಪೂರ್ಣ ವಿವರ ಒದಗಿಸುವುದು)

(ಆ) ಸುಮಾರು ೫೦ ವರ್ಷಗಳ ಸಂಚರಿಸುತ್ತಿದ್ದ ಕೆರೆ ಒಳಗಿನ ರಸ್ತೆ, ಕೆರೆಗೆ ನೀರು ತುಂಬುತ್ತಿರುವುದರಿಂದ ಎರಡು ಹಳ್ಳಗಳು ಬಂದಾಗಿ ಮೇಲ್ಕಂಡ ಗ್ರಾಮದ ರೈತರೂ ಸೇರಿದಂತೆ ಗೋಣಿತುಮಕೂರು, ದೇವಿಹಳ್ಳಿ ಹಾಗೂ ಸುತ್ತಮುತ್ತಲ ಗ್ರಾಮದ ಸಾವಿರಾರು ರೈತರು ತಮ್ಮ ಜಮೀನುಗಳಿಗೆ ಹಾಗೂ ಗ್ರಾಮಗಳಿಗೆ ಹೋಗಲು ತೊಂದರೆ ಉಂಟಾಗುತ್ತಿರುವುದು ಸರ್ಕಾರ ಹಾಗೂ ಲೋಕೋಪಯೋಗಿ ಇಲಾಖಾಧಿಕಾರಿಗಳ ಗಮನಕ್ಕೆ ಬಂದಿಲ್ಲವೆ ; ಬಂದಿದ್ದಲ್ಲಿ ಈ ರಸ್ತೆ ನವೀಕರಣಕ್ಕೆ ರೂಪಿಸಿರುವ ಯೋಜನೆ ಯಾವುದು ;

(ಇ) ಮೇಲ್ಕಂಡ ಗ್ರಾಮಸ್ಥರು ಗೋಣಿತುಮಕೂರಿನಲ್ಲಿರುವ ಪಂಚಾಯಿತಿ ಕಛೇರಿ, ಹಾಲಿನ ಡೈರಿಗೆ ಹಾಗೂ ಅಕ್ಕಪಕ್ಕದ ಗ್ರಾಮಕ್ಕೆ ಬರಲು ಈ ಬಂಡಿಜಾಡು ಸಂಚಾರಕ್ಕೆ ಯೋಗ್ಯವಿಲ್ಲದಿದ್ದು, ಸದರಿ ಬಂಡಿಜಾಡನ್ನು ಮೇಲ್ಕಂಡ ಗೇಟ್‌ನಿಂದ ಹುಲಿಕೆರೆಯವರ ತೋಟ ಹಾಗೂ ಸೊಳಿಕೆರೆಯ ಅಂಚಿನ ಮೂಲಕ ೩೦ ಅಡಿ ಸಂಚಾರಯೋಗ್ಯ ರಸ್ತೆಯನ್ನು ಒಂದು ಬಾರಿ ಅಭಿವೃದ್ಧಿಪಡಿಸುವ ಯೋಜನೆಯಡಿ ಲೋಕೋಪಯೋಗಿ ಇಲಾಖೆಯಿಂದ ನಿರ್ಮಿಸಲು ೨೦೧೫–೧೬ನೇ ಸಾಲಿನಲ್ಲಿ ರಾಜ್ಯ ಅಥವಾ ಕೇಂದ್ರದ ಯಾವುದಾದರೂ ಯೋಜನೆ ಅಡಿ ಆದ್ಯತೆ ಮೇಲೆ ಕೈಗೊಳ್ಳಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ತುರುವೇಕೆರೆ ತಾಲ್ಲೂಕಿನ ರಸ್ತೆಗಳ ಅಭಿವೃದ್ಧಿ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀ ನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೫೩೮ (೪೮೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುರುವೇಕೆರೆ ತಾಲ್ಲೂಕಿನಲ್ಲಿ ಲೋಕೋಪಯೋಗಿ ಇಲಾಖೆಗೆ ಸೇರಿರುವ ರಸ್ತೆಗಳು ಎಷ್ಟು ; ಅವು ಯಾವುವು ; (ವಿಸ್ತೀರ್ಣವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ತೆಗೆದುಕೊಂಡ ಕಾಮಗಾರಿಗಳಾವುವು ; (ಕಾಮಗಾರಿಗಳ ವಿವರ ನೀಡುವುದು)

(ಇ) ಕೇಂದ್ರ ಸರ್ಕಾರದ ಯೋಜನೆಯಲ್ಲಿ ಬಂದ ಕಾಮಗಾರಿಗಳಾವುವು ;

(ಈ) ಕೇಂದ್ರ ಸರ್ಕಾರಕ್ಕೆ ಎನ್.ಹೆಚ್.ಗೆ ಸಂಪರ್ಕ ರಸ್ತೆಗಳಿಗೆ ಸೇರಿಸಲು ಯಾವ ಯೋಜನೆಯಲ್ಲಿ ಸೇರಿಸಿ ಬೇಡಿಕೆ ಇಡಲಾಗಿದೆ ;

(ಉ) ಹಾಗಿದ್ದಲ್ಲಿ, ಯಾವ್ಯಾವ ರಸ್ತೆಗಳನ್ನು ಸೇರಿಸಲು ಕ್ರಮ ಕೈಗೊಳ್ಳಲಾಗುವುದು ?

## ತುರುವೇಕೆರೆ ತಾಲ್ಲೂಕಿನ ಅಲ್ಪಸಂಖ್ಯಾತರ ಕಲ್ಯಾಣದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀ ನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೫೭೯ (೪೮೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುರುವೇಕೆರೆ ತಾಲ್ಲೂಕಿನ ಎಷ್ಟು ಗ್ರಾಮಗಳಲ್ಲಿ ಅಲ್ಪಸಂಖ್ಯಾತರು ವಾಸವಾಗಿದ್ದರೆ ; ಯಾರ್‍ಯಾರು (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಈ ಸಮುದಾಯಕ್ಕೆ ಸರ್ಕಾರ ನೀಡಿರುವ ಅನುದಾನಗಳು ಯಾವುವು ;

(ಇ) ಜೈನ ಸಮುದಾಯವು ಅಲ್ಪ ಸಂಖ್ಯಾತರಾಗಿದ್ದು, ಇದುವರೆಗೆ ಈ ಸಮುದಾಯಕ್ಕೆ ಅನುದಾನ ನೀಡದಿರುಲು ಕಾರಣವೇನು ;

(ಈ) ಬೇಡಿಕೆ ಇರುವ ಈ ಅಲ್ಪಸಂಖ್ಯಾತ ಸಮುದಾಯಕ್ಕೆ ಈ ವರ್ಷದಲ್ಲಿ ಹೆಚ್ಚಿನ ಅನುದಾನ ನೀಡಲಾಗುವುದೆ ?

## ಕೃಷಿ ಮಾರುಕಟ್ಟೆಗಳ ಚುನಾವಣೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀ ನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೫೪೦ (೪೮೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಕೃಷಿ ಮಾರುಕಟ್ಟೆಗಳು ಎಷ್ಟು ಅವು ಯಾವುವು ;

(ಆ) ಹಾಲಿ ಇರುವ ಆಡಳಿತ ಮಂಡಳಿಗಳ ಅವಧಿ ಎಲ್ಲಿಯವರೆಗೆ ಚಾಲ್ತಿಯಲ್ಲಿರುವುದು ;

(ಇ) ಈ ವರ್ಷದಲ್ಲಿ ಹೊಸ ಆಡಳಿತ ಮಂಡಳಿಗೆ ಚುನಾವಣೆ ಯಾವಾಗ ನಡೆಸಲಾಗುವುದು ;

(ಈ) ಚುನಾವಣೆ ವರ್ಷದಲ್ಲಿ ವ್ಯಾಪಾರ ವಹಿವಾಟುಗಳಿಗೆ ತೊಂದರೆ ಆಗದಂತೆ ನೋಡಿಕೊಳ್ಳಲಾಗುವುದೆ ?

## ಮುನಿಯೂರು ಸಂಪಿಗೆ ರಸ್ತೆ ಅಭಿವೃದ್ಧಿ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀ ನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೫೪೧ (೪೮೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುರುವೇಕೆರೆಯಿಂದ ಮುನಿಯೂರು ಸಂಪಿಗೆ, ಕೊಂಡಜ್ಜಿ ಕ್ರಾಸ್‌ನಿಂದ ಕಲ್ಲೂರ್ ಕ್ರಾಸ್ ರಸ್ತೆ ತುಂಬಾ ಹಾಳಾಗಿ ಸಂಚಾರಕ್ಕೆ ತೊಂದರೆಯಾಗಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಹಲವಾರು ವರ್ಷಗಳಿಂದ ಹಾಳಾಗಿರುವ ಈ ರಸ್ತೆಗಳನ್ನು ಮರು ಡಾಂಬರೀಕರಣ ಯಾವಾಗ ಮಾಡಲಾಗುವುದು ;

(ಇ) ಈ ವರ್ಷ ವಿವಿಧ ಯೋಜನೆಗಳಲ್ಲಿ ಮಂಜೂರಾದ ಹಣವೆಷ್ಟು? ಯಾವ್ಯಾವ ಕಾಮಗಾರಿಗಳಿಗೆ ಈ ಅನುದಾನವನ್ನು ವಿನಿಯೋಗಿಸಲಾಗಿದೆ ?

## ಬೆಂಗಳೂರು ಹಾಪ್ ಕಾಮ್ಸ್‌ನಲ್ಲಿ ಕೆಲಸ ಮಾಡುತ್ತಿರುವ ನೌಕರರ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೪೨ (೬೫೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಹಾಪ್ ಕಾಮ್ಸ್ ನಲ್ಲಿ ಕೆಲಸ ಮಾಡುತ್ತಿರುವ ನೌಕರರ ಸಂಖ್ಯೆ ಎಷ್ಟು ; ಇದರಲ್ಲಿರುವ ಪರಿಶಿಷ್ಠ ಜಾತಿ, ಪರಿಶಿಷ್ಠ ವರ್ಗದ ನೌಕರರ ಸಂಖ್ಯೆ ಎಷ್ಟು ;

(ಆ) ಸುಮಾರು ೧೧ ವರ್ಷಗಳಿಂದ ಕೆಲಸ ಮಾಡುತ್ತಿರುವ ಪರಿಶಿಷ್ಠ ಜಾತಿ, ಪರಿಶಿಷ್ಠ ವರ್ಗದ ನೌಕರರಿಗೆ ಬಡ್ತಿ ನೀಡಲು ಸರ್ಕಾರ ಆದೇಶವಿದ್ದರು ಬಡ್ತಿ ನೀಡಲು ವಿಳಂಬ ಮಾಡಲು ಕಾರಣವೇನು ;

(ಇ) ಪರಿಶಿಷ್ಠ ಜಾತಿ, ಪರಿಶಿಷ್ಠ ವರ್ಗದ ಬಡ್ತಿ ವಿಷಯಕ್ಕೆ ಸಂಬಂಧಿಸಿದಂತೆ ಈ ಹಿಂದೆ ಸಿದ್ದಪಡಿಸಿರುವ ಜೇಷ್ಠತಾ ಪಟ್ಟಿ ಅರ್ಹ ನೌಕರರ ಪಟ್ಟಿಯನ್ನು ತಯಾರಿಸಲು ನೇಮಕ ಮಾಡಿರುವ ಸಮಿತಿ ವರದಿಯನ್ನು ನೀಡುವುದು ; (ವಿವರ ಒದಗಿಸುವುದು)

(ಈ) ಪರಿಶಿಷ್ಠ ಜಾತಿ, ಪರಿಶಿಷ್ಠ ವರ್ಗದ ನೌಕರರಿಗೆ ಎಷ್ಟು ಸಮಯದೊಳಗೆ ಬಡ್ತಿ ನೀಡಲಾಗುವುದು ? (ವಿವರ ಒದಗಿಸುವುದು)

## ಮೂಡಿಗೆರೆ ಪಟ್ಟಣ ಪಂಚಾಯ್ತಿ ವತಿಯಿಂದ ನಿರ್ಮಿಸಲಾಗಿರುವ ಅಂಗಡಿಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೪೩ (೬೫೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೂಡಿಗೆರೆ ಪಟ್ಟಣ ಪಂಚಾಯ್ತಿ ವತಿಯಿಂದ ನಿರ್ಮಿಸಲಾಗಿರುವ ಅಂಗಡಿ ಮಳಿಗೆಗಳೆಷ್ಟು ;

(ಆ) ಈ ಅಂಗಡಿ ಮಳಿಗೆಗಳನ್ನು ಬಾಡಿಗೆದಾರರಿಗೆ ಹಂಚಿಕೆ ಮಾಡುವಾಗ ಯಾವ ಕ್ರಮ ಅನುಸರಿಸಲಾಗಿದೆ ; ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡದವರಿಗೆ ಎಷ್ಟು ಮಳಿಗೆಗಳನ್ನು ನೀಡಲಾಗಿದೆ ;

(ಇ) ಈ ಅಂಗಡಿ ಮಳಿಗೆಗಳಿಂದ ಪಟ್ಟಣ ಪಂಚಾಯ್ತಿಗೆ ಬರುತ್ತಿರುವ ವಾರ್ಷಿಕ ಆದಾಯವೆಷ್ಟು ;

(ಈ) ಈ ಅಂಗಡಿ ಮಳಿಗೆಗಳನ್ನು ಪಡೆದ ಪರವಾನಗಿದಾರರು ಸರಿಯಾಗಿ ಬಳಿಕೆ ಮಾಡುತ್ತಿದ್ದಾರೆಯೇ ?

## ಈವರೆಗೆ ಸಕ್ಕರೆ ಕಾರ್ಖಾನೆಗಳು ಕಬ್ಬು ನುರಿಸಿದ ವಿವರ ಹಾಗೂ ರೈತರಿಗೆ ಹಣ ಸಂದಾಯ ಮಾಡಿದ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಬೈಲಹೊಂಗಲ) :–**

೫೪೪ (೫೦೦) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಈ ವರ್ಷ ಯಾವ–ಯಾವ ಸಕ್ಕರೆ ಕಾರ್ಖಾನೆ ಎಷ್ಟೆಷ್ಟು ಸಕ್ಕರೆ ಉತ್ಪಾದನೆ ಮಾಡಿರುತ್ತವೆ ;

(ಆ) ಪ್ರತಿಯೊಂದು ಕಾರ್ಖಾನೆಯವರು ರೈತರಿಗೆ ಪ್ರತಿ ಟನ್ನಿಗೆ ಎಷ್ಟು ಹಣ ಸಂದಾಯ ಮಾಡಿರುವರು ;

(ಇ) ಕಾರ್ಖಾನೆಯವರು ಕೇಂದ್ರ ಸರ್ಕಾರದವರು ನಿಗಧಿ ಮಾಡಿದ ದರ ಕೊಟ್ಟಿರುವುದಿಲ್ಲೆಂಬ ಸಂಗತಿ ನಿಜವೇ ;

(ಈ) ಕೇಂದ್ರ ಸರ್ಕಾರ ಪ್ರತಿ ಟನ್ನಿಗೆ ಎಷ್ಟು ಹಣ ನಿಗಧಿ ಮಾಡಿರುತ್ತದೆ ಸರ್ಕಾರದ ದರದ ಪ್ರಕಾರ ಹಣ ಕೊಡಲು ಯಾವ ಕ್ರಮ ಕೈಗೊಳ್ಳಲಾಗಿದೆ ?

## ಬೆಳಗಾವಿ ನಗರದಲ್ಲಿ ಹರಿಟೇಜ್ ಪಾರ್ಕ್ ಗ್ಲಾಸ್ ಹೌಸ್ ಸ್ಥಾಪನೆ ಮಾಡುವ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೫೪೫ (೫೦೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಿಂದಿನ ಮುಖ್ಯಮಂತ್ರಿಗಳು ಬೆಳಗಾವಿಯಲ್ಲಿ ಹರಿಟೇಜ್ ಪಾರ್ಕ್ ಮತ್ತು ಗ್ಲಾಸ್ ಹೌಸ್ ಸ್ಥಾಪನೆ ಮಾಡುವುದಾಗಿ ಹೇಳಿದ ಸಂಗತಿ ನಿಜವೇ ;

(ಆ) ಕಳೆದ ನಾಲ್ಕು ವರ್ಷಗಳಿಂದ ಈ ಕೆಲಸ ಆಯವ್ಯಯದಲ್ಲಿ ಸೇರಿಸಲಾಗುತ್ತಿದ್ದರೂ ಇನ್ನೂವರೆಗೂ ಪ್ರಾರಂಭವಾಗದೇ ಇರಲು ಕಾರಣವೇನು ;

(ಇ) ಆಯವ್ಯಯದಲ್ಲಿ ಈ ಕೆಲಸ ಸೇರಿದ್ದರೂ ಇನ್ನೂವರೆಗೂ ಕೆಲಸ ಪ್ರಾರಂಭಿಸಲು ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ?

## ಹನಿ ನೀರಾವರಿ ಯೋಜನೆಗೆ ಹಣ ಬಿಡುಗಡೆ ಮಾಡುವ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೫೪೬ (೫೦೪) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ, ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಿಗೆ ಹನಿ ನೀರಾವರಿ ಯೋಜನೆಗಾಗಿ ಕಳೆದ ಮೂರು ವರ್ಷಗಳಿಂದ ಮಂಜೂರಾದ ಅನುದಾನವೆಷ್ಟು ; ಇದರಲ್ಲಿ ಬಿಡುಗಡೆಯಾದ ಮೊತ್ತವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಯೋಜನೆಗೆ ಈಗ ಹಣ ಬಿಡುಗಡೆಯಾಗದೇ ಇರುವುದರಿಂದ, ಸದರಿ ಯೋಜನೆಯ ಲಾಭ ಪಡೆಯುವಲ್ಲಿ ರೈತರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಾದರೆ ಕೂಡಲೇ ಉಳಿದ ಹಣವನ್ನು ಬಿಡುಗಡೆ ಮಾಡಲು ಸರ್ಕಾರವು ಕ್ರಮ ಕೈಗೊಳ್ಳುವುದೇ ?

## ರೈತರು ಬೆಳೆ ವಿಮೆ ಹಣ ಸರಿಯಾಗಿ ಪಾವತಿಯಾಗದೇ ಇರುವ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೫೪೭ (೫೦೩) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಈ ವರ್ಷ ಭೀಕರ ಬರಗಾಲ ಬಿದ್ದಿರುವ ಹಿನ್ನೆಲೆಯಲ್ಲಿ ರೈತರಿಗೆ ಎಷ್ಟು ಹಣ ಬೆಳೆ ವಿಮೆಯಾಗಿ ಬಿಡುಗಡೆ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಬೆಳಗಾವಿ, ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗಳಲ್ಲಿ ರೈತರಿಗೆ ಎಷ್ಟು ಹಣ ಬೆಳೆ ವಿಮೆಯಾಗಿ ಬಿಡುಗಡೆ ಮಾಡಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಬೆಳಗಾವಿ ಜಿಲ್ಲೆಯಲ್ಲಿ ಇನ್ನೂವರೆಗೂ ರೈತರಿಗೆ ಬೆಳೆ ವಿಮೆ ಹಣ ಪಾವತಿಯಾಗದೇ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬೆಳಗಾವಿ ಜಿಲ್ಲೆಗೆ ಎಷ್ಟು ಬೆಳೆ ವಿಮೆ ಹಣ ಬಿಡುಗಡೆಯಾಗಿರುತ್ತದೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಈ ಬೆಳೆ ವಿಮೆ ಹಣ ಪಾವತಿ ಮಾಡಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು ;

(ಉ) ರೈತರಿಗೆ ಸಮರ್ಪಕವಾಗಿ ಬೆಳೆ ವಿಮೆ ಹಣ ಬಿಡುಗಡೆಯಾಗದೇ ಇರುವುದರಿಂದ ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಹಾಗಿದ್ದಲ್ಲಿ, ಕೂಡಲೇ ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕಿನಲ್ಲಿ ರೈತರಿಗೆ ಬೆಳೆ ವಿಮೆ ಹಣ ಬಿಡುಗಡೆ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ ?

## ಬೈಲಹೊಂಗಲ ನಗರದ ಪುರಸಭೆಯಲ್ಲಿ ಘನತ್ಯಾಜ್ಯ ವಸ್ತು ವಿಲೇವಾರಿಯಲ್ಲಿ ಆಗುತ್ತಿರುವ ತೊಂದರೆ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಬೈಲಹೊಂಗಲ ಕ್ಷೇತ್ರ) :–**

೫೪೮ (೫೦೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆ, ಬೈಲಹೊಂಗಲ ನಗರದ ಈಗಿನ ಜನಸಂಖ್ಯೆ ಎಷ್ಟು ;

(ಆ) ಪುರಸಭೆಯವರಿಂದ ಎಷ್ಟು ಎಕರೆ ಕ್ಷೇತ್ರದಲ್ಲಿ ಘನತ್ಯಾಜ್ಯ ವಸ್ತುವನ್ನು ವಿಲೇವಾರಿ ಮಾಡಲಾಗುತ್ತಿದೆ ;

(ಇ) ಈಗಿರುವ ಸ್ಥಳ ಸಾಕಾಗುತ್ತಿಲ್ಲವೆಂಬ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಈಗಿನ ಜನಸಂಖ್ಯೆಗನುಗುಣವಾಗಿ ಹಾಗೂ ಮುಂದೆ ಹೆಚ್ಚಿಗೆ ಆಗುವ ಜನಗಣತಿಗೆ ಅನುಗುಣವಾಗಿ ಕೂಡಲೇ ಜಮೀನು ಖರೀದಿ ಮಾಡಿ, ಅಲ್ಲಿ ಆಧುನಿಕ ಗೊಬ್ಬರ ತಯಾರು ಮಾಡುವ ಯಂತ್ರೋಪಕರಣಗಳನ್ನು ಅಳವಡಿಸಿ ಜನರಿಗೆ ತೊಂದರೆ ಆಗದಂತೆ ಕ್ರಮ ಕೈಗೊಳ್ಳಲಾಗುವುದೇ ;

(ಉ) ಪುರಸಭೆಯ ಅರ್ಥಿಕ ಸ್ಥಿತಿ ಚೆನ್ನಾಗಿ ಇಲ್ಲದೆ ಇರುವುದರಿಂದ ಹೆಚ್ಚಿನ ಜಮೀನು ತೆಗೆದುಕೊಳ್ಳಲು ತೊಂದರೆ ಆಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಹಾಗಿದ್ದಲ್ಲಿ, ಅವಶ್ಯವಿರುವ ಹಣ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದೆ ?

## ಲೋಕೋಪಯೋಗಿ ಇಲಾಖೆಯಲ್ಲಿನ ಕಾಮಗಾರಿಗಳ ಬಗ್ಗೆ

**ಶ್ರೀ ಗೋ. ಮಧುಸೂದನ (ಪದವೀಧರರ ಕ್ಷೇತ್ರ) :–**

೫೪೯ (೪೯೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ವಿವಿಧ ಲೆಕ್ಕಶೀರ್ಷಿಕೆಗಳಲ್ಲಿ ಲೋಕೋಪಯೋಗಿ ಇಲಾಖೆಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಎಷ್ಟು ; (ಲೆಕ್ಕಶೀರ್ಷಿಕೆವಾರು ಕಾಮಗಾರಿಗಳ ವಿವರ ನೀಡುವುದು)

(ಆ) ಈ ಕಾಮಗಾರಿಗಳಲ್ಲಿ ಪೂರ್ಣಗೊಂಡಿರುವ ಕಾಮಗಾರಿಗಳು ಎಷ್ಟು; ಪೂರ್ಣಗೊಂಡ ಕಾಮಗಾರಿಗಳಿಗೆ ಪಾವತಿಸಲಾಗಿರುವ ಮೊತ್ತ ಎಷ್ಟು; ಪಾವತಿಸಲು ಬಾಕಿಯಿರುವ ಮೊತ್ತ ಎಷ್ಟು ? (ಲೆಕ್ಕಶೀರ್ಷಿಕೆವಾರು ವಿವರ ನೀಡುವುದು)

## ಲೋಕೋಪಯೋಗಿ ಇಲಾಖೆಯು ಪಡೆದಿರುವ ಹಣಕಾಸು ಸಂಸ್ಥೆಗಳಲ್ಲಿನ ಸಾಲದ ಬಗ್ಗೆ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೫೫೦ (೪೯೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ನಬಾರ್ಡ್ ವಿಶ್ವ ಸಂಸ್ಥೆ ಮತ್ತಿತರ ಹಣಕಾಸು ಸಂಸ್ಥೆಗಳಿಂದ ಲೋಕೋಪಯೋಗಿ ಇಲಾಖೆಯವರು ಪಡೆದುಕೊಂಡಿರುವ ಸಾಲದ ಮೊತ್ತ ಎಷ್ಟು ; (ಸಂಸ್ಥೆವಾರು ವಿವರ ನೀಡುವುದು)

(ಆ) ಯಾವ ಬಡ್ಡಿದರದಂತೆ ಸಾಲವನ್ನು ಪಡೆಯಲಾಗಿದೆ ? (ಸಂಸ್ಥೆವಾರು ವಿವರ ನೀಡುವುದು)

## ರಾಜ್ಯದಲ್ಲಿನ ರಾಷ್ಟ್ರೀಯ ಹೆದ್ದಾರಿಗಳ ಬಗ್ಗೆ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೫೫೧ (೪೯೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹಾಲಿಯಿರುವ ರಾಷ್ಟ್ರೀಯ ಹೆದ್ದಾರಿಗಳ (ಎನ್.ಹೆಚ್.) ಸಂಖ್ಯೆ ಎಷ್ಟು ; ಅದರ ವಿಸ್ತೀರ್ಣ ಎಷ್ಟು ; (ರಾಷ್ಟ್ರೀಯ ಹೆದ್ದಾರಿಯಾಗಿ ಘೋಷಣೆಯಾದ ದಿನಾಂಕ ಸಹಿತ ವಿವರ ನೀಡುವುದು)

(ಆ) ಇನ್ನು ಯಾವ ಯಾವ ರಸ್ತೆಗಳನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಮೇಲ್ದರ್ಜೆಗೆ ಏರಿಸಲು ಕೇಂದ್ರಕ್ಕೆ ಮನವಿ ಸಲ್ಲಿಸಲಾಗಿದೆ ; (ವಿವರ ನೀಡುವುದು)

(ಇ) ಕೇಂದ್ರ ಸರ್ಕಾರ ರಾಜ್ಯದ ಯಾವ ಯಾವ ರಸ್ತೆಗಳನ್ನು ಉನ್ನತೀಕರಿಸಲು ತಾತ್ವಿಕ ಒಪ್ಪಿಗೆ ನೀಡಿದೆ ?

# ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿನ ಕೃಷಿ ಬೆಳೆಗಳಿಗೆ ನೀಡುವ ಬೆಂಬಲ ಬೆಲೆ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೨ (೫೧೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಯಾವ ಯಾವ ಕೃಷಿ ಬೆಳೆಗಳಿಗೆ ಬೆಂಬಲ ಬೆಲೆ ಘೋಷಿಸಲಾಗಿದೆ ; (ಆದೇಶದ ಪ್ರತಿ ಒದಗಿಸುವುದು)

(ಆ) ಸದರಿ ವರ್ಷದಲ್ಲಿ ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಯಲ್ಲಿ ಕೃಷಿ ಬೆಳೆಗಳಿಗೆ ಬೆಂಬಲ ಬೆಲೆಯನ್ನು ಯಾವ ದಿನಾಂಕದಿಂದ ಘೋಷಿಸಲಾಯಿತು ; ಹಾಗೂ ಇದರನ್ವಯ ಖರೀದಿಸಲಾದ ವಿವಿಧ ಕೃಷಿ ಬೆಳೆಗಳ ಪ್ರಮಾಣಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಯಲ್ಲಿ ಕೃಷಿ ಬೆಳೆಗಳಿಗೆ ಬೆಂಬಲ ಬೆಲೆ ಘೋಷಿಸುವಲ್ಲಿ ಹಾಗೂ ಯೋಜನೆಯ ಪ್ರಾಮಾಣಿಕ ಜಾರಿಯಲ್ಲಿ ಇಲಾಖಾಧಿಕಾರಿಗಳು ನಿರ್ಲಕ್ಷ್ಯ ಹಾಗೂ ವಿಳಂಬ ನೀತಿ ಅನುಸರಿಸುತ್ತಿರುವುದಲ್ಲದೆ ಬೆಳೆ ತಂದ ರೈತರಿಗೆ ಅನಾವಶ್ಯಕ ಕಿರುಕುಳ ನೀಡುತ್ತಿರುವುದರಿಂದ ರೈತರಿಗೆ ಅನ್ಯಾಯವಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ; ಗಮನಿಸಿದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಕ್ರಮಕೈಗೊಳ್ಳುವುದೇ?

# ರಾಜ್ಯದಲ್ಲಿ ಪ್ರಸಕ್ತ ಸರ್ಕಾರ ಆಡಳಿತಕ್ಕೆ ಬಂದ ನಂತರ ರೈತರ ಆತ್ಮಹತ್ಯೆ ಪ್ರಕರಣಗಳಲ್ಲಿ ಪರಿಹಾರ ವಿತರಿಸಿದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೩ (೫೧೩) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಸಕ್ತ ಸರ್ಕಾರ ಆಡಳಿತಕ್ಕೆ ಬಂದ ನಂತರ ಆತ್ಮಹತ್ಯೆ ಮಾಡಿಕೊಂಡ ರೈತರುಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ವರ್ಷವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಪ್ರಸಕ್ತ ಸರ್ಕಾರ ಆಡಳಿತಕ್ಕೆ ಬಂದ ನಂತರ ರೈತರ ಆತ್ಮಹತ್ಯೆ ಪ್ರಕರಣದಲ್ಲಿ ಪರಿಹಾರ ವಿತರಿಸಲಾದ ಪ್ರಕರಣಗಳೆಷ್ಟು; ಮತ್ತು ಪರಿಹಾರ ವಿತರಿಸಲು ಬಾಕಿ ಇರುವ ಪ್ರಕರಣಗಳೆಷ್ಟು; (ತಾಲ್ಲೂಕುವಾರು, ವರ್ಷವಾರು, ಪ್ರಕರಣವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಪ್ರಸಕ್ತ ಸರ್ಕಾರ ಆಡಳಿತಕ್ಕೆ ಬಂದ ನಂತರ ರೈತರ ಆತ್ಮಹತ್ಯೆ ಪ್ರಕರಣಗಳಲ್ಲಿ ಕೆಲವೊಂದು ಪ್ರಕರಣಗಳಿಗೆ ಈ ತನಕ ಪರಿಹಾರ ಧನ ವಿತರಿಸದಿರಲು ಕಾರಣವೇನು ; ಮತ್ತು ಈ ತನಕ ಪರಿಹಾರ ಧನ ವಿತರಿಸದ ಪ್ರಕರಣಗಳಲ್ಲಿ ಪರಿಹಾರಧನ ವಿತರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ರಾಜ್ಯದಲ್ಲಿ ರೈತರ ಆತ್ಮಹತ್ಯೆಗಳನ್ನು ತಡೆಯಲು ಸರ್ಕಾರ ಹಾಕಿಕೊಂಡಿರುವ ಕಾರ್ಯಕ್ರಮಗಳೇನು ?

# ಉಡುಪಿ ಜಿಲ್ಲೆಯಲ್ಲಿನ ವಿವಿಧ ತಾಲ್ಲೂಕುಗಳಲ್ಲಿ ತೋಟಗಾರಿಕೆ ಇಲಾಖೆಗೆ ಸಹಾಯಧನ ಹಾಗೂ ಸವಲತ್ತು ಕೋರಿ ಬಂದ ಅರ್ಜಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೪ (೫೧೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿನ ವಿವಿಧ ತಾಲ್ಲೂಕುಗಳ ತೋಟಗಾರಿಕಾ ಇಲಾಖಾ ಕಛೇರಿಗಳಿಗೆ ಕಳೆದ ಎರಡು ವರ್ಷಗಳಲ್ಲಿ ವಿವಿಧ ಲೆಕ್ಕ ಶೀರ್ಷಿಕೆಗಳಲ್ಲಿ ಬಿಡುಗಡೆಗೊಂಡ ಹಾಗೂ ವ್ಯಯಿಸಲಾದ ಹಾಗೂ ಬಿಡುಗಡೆಗೆ ಬಾಕಿ ಇರುವ ಅನುದಾನಗಳೆಷ್ಟು ; (ಕಛೇರಿವಾರು, ವರ್ಷವಾರು, ಲೆಕ್ಕ ಶೀರ್ಷಿಕೆವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿನ ವಿವಿಧ ತಾಲ್ಲೂಕುಗಳ ತೋಟಗಾರಿಕಾ ಇಲಾಖಾ ಕಛೇರಿಗಳಿಗೆ ಸಹಾಯಧನ ಹಾಗೂ ವಿವಿಧ ಸವಲತ್ತು ಕೋರಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು ; ಮತ್ತು ಇವುಗಳಲ್ಲಿ ಸವಲತ್ತು ಹಾಗೂ ಸಹಾಯಧನ ನೀಡಲಾದ ಅರ್ಜಿಗಳೆಷ್ಟು ; ಮತ್ತು ನೀಡಲು ಬಾಕಿ ಇರುವ ಅರ್ಜಿಗಳೆಷ್ಟು ; ಮತ್ತು ಸವಲತ್ತು ಹಾಗೂ ಸಹಾಯಧನ ಕೋರಿ ಬಂದು ನೀಡಲು ಬಾಕಿ ಇರುವ ಅರ್ಜಿಗಳ ವಿಲೇವಾರಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ರೈತರಿಂದ ಸಹಾಯಧನ ಹಾಗೂ ಸವಲತ್ತುಗಳಿಗೆ ಹೆಚ್ಚುವರಿ ಅರ್ಜಿ ಸ್ವೀಕರಿಸಿ ಅವರಿಗೆ ಸಹಾಯಧನ ಹಾಗೂ ಸವಲತ್ತುಗಳನ್ನು ನೀಡದೆ ಇರುವುದರಿಂದ ರೈತರು ವ್ಯರ್ಥ ಇಲಾಖಾ ಕಛೇರಿಗಳಿಗೆ ಅಲೆದಾಡುವುದರ ಮೂಲಕ ರೈತರಿಗಾಗುತ್ತಿರುವ ನಷ್ಟ ಹಾಗೂ ತೊಂದರೆಯನ್ನು ಸರ್ಕಾರ ಗಮನಿಸಿದೆಯೇ ; ಗಮನಿಸಿದಲ್ಲಿ ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಉಡುಪಿ ಜಿಲ್ಲೆ ಕುಂದಾಪುರ ತಾಲ್ಲೂಕಿನ ಸೌಡ ಶಂಕರನಾರಾಯಣ ಸಂಪರ್ಕ ಸೇತುವೆ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೫ (೫೧೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆ ಕುಂದಾಪುರ ತಾಲ್ಲೂಕಿನ ವರಹ ನದಿಗೆ ಅಡ್ಡಲಾಗಿ ಸೌಡ ಶಂಕರನಾರಾಯಣ ಸಂಪರ್ಕ ಸೇತುವೆ ನಿರ್ಮಿಸಲು ತಗುಲುವ ಒಟ್ಟು ಅಂದಾಜು ಮೊತ್ತವೆಷ್ಟು ;

(ಆ) ಈ ಕಾಮಗಾರಿಯನ್ನು ಯಾವ ಲೆಕ್ಕಶೀರ್ಷಿಕೆಯಡಿಯಲ್ಲಿ ಕೈಗೊಳ್ಳಲಾಗುವುದು ಈ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ?

## ಎಲ್.ಇ.ಡಿ. ಬಲ್ಬ್ ಯೋಜನೆ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೬ (೬೪೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಲ್ಲಾ ಮನೆಗಳಲ್ಲಿ ಎಲ್.ಇ.ಡಿ. ಬಲ್ಬ್ ಅಳವಡಿಸಿಕೊಳ್ಳಲು ಸರ್ಕಾರ ಚಾಲನೆ ನೀಡಲಾಗಿದೆಯೇ ;

(ಆ) ಎಲ್.ಇ.ಡಿ. ಬಲ್ಬ್ ಗಳನ್ನು ಸಾರ್ವಜನಿಕರಿಗೆ ಉಚಿತವಾಗಿ ನೀಡಲಾಗುತ್ತದೆಯೇ; ಹಾಗಿದ್ದಲ್ಲಿ, ಇದರ ಉಪಯೋಗವನ್ನು ಸಾರ್ವಜನಿಕರು ಯಾವ ರೀತಿ ಪಡೆದುಕೊಳ್ಳಬಹುದು ;

(ಇ) ರಾಜ್ಯದ ಎಲ್ಲಾ ವರ್ಗದ ಜನರಿಗೆ ಈ ಸೌಲಭ್ಯ ಕಲ್ಪಿಸಲಾಗುತ್ತದೆಯೇ; ಅಥವಾ ಕೇವಲ ಹಿಂದುಳಿದ ವರ್ಗದವರಿಗೆ ಮತ್ತು ಬಿ.ಪಿ.ಎಲ್. ಕಾರ್ಡುದಾರರಿಗೆ ಮಾತ್ರವೇ ;

(ಈ) ಸರ್ಕಾರದ ವತಿಯಿಂದ ಎಲ್.ಇ.ಡಿ. ಬಲ್ಬ್ ಗಳನ್ನು ವಿತರಿಸುವುದಾದರೆ ಗ್ರಾಮೀಣ ಭಾಗದ ಜನರು ಈ ಸೌಲಭ್ಯವನ್ನು ಎಲ್ಲಿ ಪಡೆದುಕೊಳ್ಳಬೇಕು ; ನಗರ ವಾಸಿಗಳಿಗೆ ಇರುವ ಅವಕಾಶಗಳೇನು ; ಚಿಕ್ಕಮಗಳೂರು ಜಿಲ್ಲೆಯಲ್ಲಿ ಈಗಾಗಲೇ ಎಷ್ಟು ಕುಟುಂಬಗಳಿಗೆ ಈ ಯೋಜನೆಯಡಿ ಅನುಕೂಲ ಕಲ್ಪಿಸಲಾದೆ ? (ತಾಲ್ಲೂಕುವಾರು ಮತ್ತು ಗ್ರಾಮವಾರು ಸಂಪೂರ್ಣ ಮಾಹಿತಿ ನೀಡುವುದು)

## ಪಶು ಭಾಗ್ಯ ಯೋಜನೆ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೭ (೬೪೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮೃತ ಪಡುತ್ತಿರುವ ರೈತರ ಕುಟುಂಬಕ್ಕೆ ಸ್ವಾವಲಂಭಿ ಜೀವನ ನಡೆಸಲು "ಪಶು ಭಾಗ್ಯ" ಯೋಜನೆಯನ್ನು ಜಾರಿಗೆ ತರುವುದಾಗಿ ಘೋಷಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಮೃತ ರೈತ ಕುಟುಂಬಕ್ಕೆ ಸ್ವಾವಲಂಭಿ ಜೀವನ ಸಾಗಿಸಲು ಈ ಯೋಜನೆಯಲ್ಲಿ ಏನೇಲ್ಲಾ ಅನುಕೂಲಗಳನ್ನು ಒದಗಿಸಲಾಗುತ್ತದೆ;

(ಈ) ಸದರಿ ಯೋಜನೆಯ ಸದುಪಯೋಗ ಪಡೆದುಕೊಳ್ಳಲು ಇರುವ ಮಾನದಂಡಗಳೇನು : (ಮಾಹಿತಿ ನೀಡುವುದು)

(ಉ) ಚಿಕ್ಕಮಗಳೂರು ಜಿಲ್ಲೆಗೆ ಈ ಯೋಜನೆಯಡಿ ಎಷ್ಟು ಅನುದಾನ ಮೀಸಲಿಡಲಾಗಿದೆ ; ನಕ್ಸಲ್ ಪೀಡಿತ ಪ್ರದೇಶದವರಿಗೆ ವಿಶೇಷ ಯೋಜನೆಯನ್ನು ಜಾರಿಗೆ ತರುವ ವಿಚಾರ ಸರ್ಕಾರದ ಮುಂದೆ ಇದೆಯೇ ? (ಮಾಹಿತಿ ನೀಡುವುದು)

# ೨೦೧೫-೧೬ನೇ ಸಾಲಿನ ಅಲ್ಪಸಂಖ್ಯಾತರ ಕಲ್ಯಾಣ ನಿಧಿ ಅನುದಾನದ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೫೮ (೬೪೯) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೨೦೧೫-೧೬ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ನಿಧಿಯಲ್ಲಿ ಮೀಸಲಿಟ್ಟ ಅನುದಾನವನ್ನು ಸದ್ಬಳಕೆ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬಳಕೆಯಾದ ಅನುದಾನದಲ್ಲಿ ಕೈಗೊಂಡ ಕೆಲಸ ಕಾರ್ಯಗಳು ಯಾವುವು ; ಯಾವ ಯಾವ ಅಭಿವೃದ್ಧಿ ಕಾರ್ಯಗಳಿಗೆ ಎಷ್ಟು ಹಣವನ್ನು ವಿನಿಯೋಗಿಸಲಾಯಿತು ;

(ಇ) ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಬರುವ ಜಾತಿಗಳು ಎಷ್ಟು ; ಯಾವ ಯಾವ ವರ್ಗಕ್ಕೆ ಎಷ್ಟು ಅನುದಾನ ನೀಡಲಾಗಿದೆ; ಯಾವ ಯಾವ ವರ್ಗಗಳಿಗೆ ಯೋಜನೆಗಳನ್ನು ರೂಪಿಸಲಾಗಿದೆ; (ಮಾಹಿತಿ ನೀಡುವುದು)

(ಈ) ರಾಜ್ಯದ ಎಷ್ಟು ಜನರಿಗೆ ಶಾದಿಭಾಗ್ಯ ಯೋಜನೆಯಡಿ ಅನುಕೂಲ ಮಾಡಿಕೊಡಲಾಗಿದೆ ; (೨೦೧೪-೧೫ ಮತ್ತು ೨೦೧೫-೧೬ನೇ ಸಾಲಿನಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಒಟ್ಟು ಎಷ್ಟು ಜನರಿಗೆ ಈ ಯೋಜನೆಯಡಿ ಅವಕಾಶ ಕಲ್ಪಿಸಲಾಗಿದೆ ; (ಮಾಹಿತಿ ನೀಡುವುದು)

(ಉ) ಶಾದಿಮಹಲ್ ಯೋಜನೆಯಡಿಯಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ಎಷ್ಟು ಶಾದಿಮಹಲ್‌ಗಳನ್ನು ಯಾವ ಯಾವ ಸಮುದಾಯಗಳಿಗೆ ನೀಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಊ) ಇನ್ನೂ ಸರ್ಕಾರದ ಖಜಾನೆಯಲ್ಲಿ ಬಾಕಿ ಇರುವ ಅನುದಾನವನ್ನು ಯಾವ ಕಾಲಮಿತಿಯಲ್ಲಿ ಸದ್ಬಳಕೆ ಮಾಡಲಾಗುತ್ತದೆ ?

## ಮೂಡುಗೆರೆ–ಭೈರಾಪೂರ–ಶಿಶಿಲಾ ರಸ್ತೆ ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೯ (೬೪೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೂಡುಗೆರೆ ಭೈರಾಪೂರ ಶಿಶಿಲಾ ರಸ್ತೆ ಅಭಿವೃದ್ಧಿಪಡಿಸುವ ವಿಚಾರ ಸರ್ಕಾರದ ಮುಂದಿದೆಯೇ

(ಆ) ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಈ ಕಾಮಗಾರಿಯನ್ನು ಕೈಗೊಳ್ಳಲಾಗುವುದು ;

(ಇ) ಸದರಿ ರಸ್ತೆ ಅಭಿವೃದ್ಧಿ ಆಗುವುದರಿಂದ ಶ್ರೀಕ್ಷೇತ್ರವಾದ ಧರ್ಮಸ್ಥಳಕ್ಕೆ ಮತ್ತು ಶ್ರೀಕ್ಷೇತ್ರ ಕುಕ್ಕೆ ಸುಬ್ರಮಣ್ಯಕ್ಕೆ, ಪುತ್ತೂರು, ಸುಳ್ಯಾ ಮಾರ್ಗವಾಗಿ ಹೋಗುವ ಭಕ್ತಾದಿಗಳಿಗೆ ೧೫ ಕಿ.ಮೀ. ಉಳಿತಾಯವಾಗುತ್ತದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಕಾಮಗಾರಿಯನ್ನು ಕೈಗೆತ್ತಿಕೊಂಡು ಅಭಿವೃದ್ಧಿಪಡಿಸಲಾಗುವುದೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಈ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಸದರಿ ರಸ್ತೆ ಅಭಿವೃದ್ಧಿಪಡಿಸಲು ಅಂದಾಜು ಎಷ್ಟು ವೆಚ್ಚವಾಗುವುದು? (ಸಂಪೂರ್ಣ ಮಾಹಿತಿ ನೀಡುವುದು)

## ಉದ್ಯಾನವನ ನಿರ್ಮಾಣ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೫೬೦ (೫೧೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಲಾಲ್‌ಬಾಗ್ ಉದ್ಯಾನವನ ನಿರ್ಮಾಣವಾಗಿ ೨೦೦ ಕ್ಕೂ ಹೆಚ್ಚು ವರ್ಷಗಳಾಗಿದ್ದು, ಇದುವರೆವಿಗೂ ಆ ರೀತಿಯ ಮತ್ತು ಅಷ್ಟು ವಿಸ್ತಾರವಾದ ಉದ್ಯಾನವನ ರಾಜ್ಯದಲ್ಲಿ ನಿರ್ಮಾಣವಾಗಿಲ್ಲವೆನ್ನುವುದು ನಿಜವೇ ;

(ಆ) ಅದೇ ರೀತಿಯ ಉತ್ತಮ ಮತ್ತು ವಿಸ್ತಾರವಾದ ಮತ್ತೊಂದು ಉದ್ಯಾನವನ್ನು ರಾಜ್ಯದಲ್ಲಿ ನಿರ್ಮಿಸಲು ಸರ್ಕಾರ ಮುಂದಾಗದಿರಲು ಕಾರಣವೇನು ;

(ಇ) ಇನ್ನೊಂದು ಬೃಹತ್ ಹಾಗೂ ಮಾದರಿ ಉದ್ಯಾನವನವನ್ನು ನಿರ್ಮಿಸುವ ಯೋಜನೆಯನ್ನು ಕೈಗೊಳ್ಳುವ ಇರಾದೆ ಸರ್ಕಾರಕ್ಕಿದೆಯೇ?

## ಸೌರ ವಿದ್ಯುತ್ ಯೋಜನೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೫೬೧ (೫೨೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) "ಛಾವಣಿಯಲ್ಲಿ ಸೌರ ವಿದ್ಯುತ್" ಯೋಜನೆ ಜಾರಿಯಲ್ಲಿದೆಯೇ; ಇದ್ದಲ್ಲಿ, ಯೋಜನೆಯ ವಿವರ ನೀಡುವುದು ;

(ಆ) ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಕಳೆದ ಎರಡು ವರ್ಷಗಳಲ್ಲಿ ಇದ್ದ ಗುರಿ ಎಷ್ಟು ;

(ಇ) ಸದರಿ ಯೋಜನೆಯಡಿಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಎಷ್ಟು ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸಲಾಗಿದೆ ;

(ಈ) ಈ ಯೋಜನೆಯು ನಿಶ್ಚಿತ ಗುರಿ ಸಾಧಿಸದಿರಲು ಕಾರಣವೇನು; ಈ ಯೋಜನೆಯನ್ನು ಹೆಚ್ಚು ಪ್ರೋತ್ಸಾಹಿಸಲು ತೆಗೆದುಕೊಳ್ಳುವ ಮುಂದಿನ ಕ್ರಮಗಳೇನು ?

## ಎಲ್.ಇ.ಡಿ. ಬಲ್ಬುಗಳ ಬಳಕೆಯಿಂದಾಗುವ ದುಷ್ಪರಿಣಾಮಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೫೭೨ (೭೫೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ರಾಜ್ಯ ಸರ್ಕಾರವು "ಹೊಸಬೆಳಕು" ಯೋಜನೆಯಡಿ ವಿತರಿಸುತ್ತಿರುವ ಎಲ್.ಇ.ಡಿ. ಬಲ್ಬುಗಳಿಂದ ಮನುಷ್ಯರ ಕಣ್ಣಿಗೆ ಹಾನಿಯಾಗುತ್ತದೆಂದು ಪತ್ರಿಕೆಗಳಲ್ಲಿ ವರದಿ ಬಂದಿರುವುದು ಸತ್ಯವೇ;

(ಆ) ಈ ಬಲ್ಬುಗಳ ಬಳಕೆಯಿಂದ ಮನುಷ್ಯರ ಕಣ್ಣುಗಳು ಅಥವಾ ಇತರೆ ಅಂಗಾಂಗಗಳ ಮೇಲೆ ಆಗುವ ಪರಿಣಾಮಗಳ ಬಗ್ಗೆ ಇಲಾಖೆಯು ಯಾವುದಾದರೂ ಅಧ್ಯಯನ ನಡೆಸಿದೆಯೇ; (ವಿವರ ನೀಡುವುದು)

(ಇ) ಹಾಗೇ ಈ ಬಲ್ಬುಗಳ ಬಳಕೆಯಿಂದಾಗಿ ಮನುಷ್ಯರ ಮೇಲೆ ಯಾವುದೇ ದುಷ್ಪರಿಣಾಮಗಳು ಆಗುವುದಿಲ್ಲ ಎಂಬ ಬಗ್ಗೆ ರಾಜ್ಯದ ಆರೋಗ್ಯ ಇಲಾಖೆಯಿಂದ ಯಾವುದಾದರೂ ವರದಿ ಪಡೆಯಲಾಗಿದೆಯೇ; ಪಡೆದಿದ್ದಲ್ಲಿ, ಅದರ ಸಂಪೂರ್ಣ ಮಾಹಿತಿ ಒದಗಿಸುವುದು ?

## ಸಬ್ಸಿಡಿ ದರದಲ್ಲಿ ಟ್ರ್ಯಾಕ್ಟರ್‌ಗಳನ್ನು ನೀಡುತ್ತಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೫೬೩ (೬೫೯) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದವರಿಗೆ ಸಬ್ಸಿಡಿ ದರದಲ್ಲಿ ಟ್ರ್ಯಾಕ್ಟರ್‌ಗಳನ್ನು ಖರೀದಿಸಲು ಸಬ್ಸಿಡಿಯನ್ನು ನೀಡಲಾಗುತ್ತಿದೆಯೇ ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಖರೀದಿ ದರದಲ್ಲಿ ಶೇಕಡಾ ಎಷ್ಟು ಸಬ್ಸಿಡಿಯನ್ನು ನೀಡಲಾಗುತ್ತಿದೆ ;

(ಇ) ಸಬ್ಸಿಡಿಯನ್ನು ನೀಡಲು ಅನುಸರಿಸುತ್ತಿರುವ ಮಾನದಂಡಗಳೇನು;

(ಈ) ಬೀದರ್ ಜಿಲ್ಲೆಯಲ್ಲಿ ಎಷ್ಟು ಮಂದಿ ಫಲಾನುಭವಿಗಳನ್ನು ಗುರುತಿಸಲಾಗಿದೆ ; ಹಾಗೂ ಎಷ್ಟು ಮಂದಿ ಫಲಾನುಭವಿಗಳಿಗೆ ಸಬ್ಸಿಡಿಯನ್ನು ನೀಡಲಾಗಿದೆ ? (ಫಲಾನುಭವಿಗಳ ವಿವರ ನೀಡುವುದು)

## ತೋಟಗಾರಿಕೆ ಇಲಾಖೆಗೆ ಸೇರಿದ ಆಸ್ತಿ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೫೬೪ (೬೬೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ತೋಟಗಾರಿಕೆ ಇಲಾಖೆಗೆ ಸೇರಿದ ಆಸ್ತಿಯ ಪ್ರಮಾಣವೆಷ್ಟು ; (ಕ್ಷೇತ್ರವಾರು ಮಾಹಿತಿ ನೀಡುವುದು)

(ಆ) ಯಾವ ಯಾವ ಹೋಬಳಿಗಳಲ್ಲಿ ಎಷ್ಟೆಷ್ಟು ಆಸ್ತಿ ಇದೆ; ಈ ಆಸ್ತಿಯಲ್ಲಿ ಬೆಳೆದಿರುವ ಬೆಳೆಗಳು ಯಾವುವು ; (ಹೋಬಳಿವಾರು ಮಾಹಿತಿ ಒದಗಿಸುವುದು)

(ಇ) ಈ ತೋಟಗಾರಿಕೆ ಇಲಾಖೆಯಿಂದ ರೈತರಿಗೆ ಸಿಗುತ್ತಿರುವ ಸೌಲಭ್ಯಗಳು ಯಾವುವು ;

(ಈ) ರೈತರಿಗೆ ರಿಯಾಯಿತಿ ದರದಲ್ಲಿ ದೊರಕಿಸಿ ಕೊಡುತ್ತಿರುವ ಯಾವುದಾದರೂ ಬೆಳೆಗಳು ಇವೆಯೇ ; ಇದ್ದಲ್ಲಿ, ವಿವರ ನೀಡುವುದು?

## ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೫೬೫ (೬೮೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ನೌಕರರ ಸಂಖ್ಯೆ ಎಷ್ಟು ; ಹಾಗೆ ದಿನಗೂಲಿ ನೌಕರರ ಸಂಖ್ಯೆ ಎಷ್ಟು ; (ವೃಂದವಾರು–ಪದನಾಮದೊಂದಿಗೆ ಹೆಸರು ಸಹಿತ ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಖಾಯಂ/ದಿನಗೂಲಿ ನೌಕರರು ಯಾವ ಯಾವ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ; (ಸಂಕಲನದೊಂದಿಗೆ ಸಂಪೂರ್ಣ ವಿವರ ಒದಗಿಸುವುದು)

(ಇ) ಹಾಗೇ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ಎಷ್ಟು ; (ಶಾಖೆಗಳೊಂದಿಗೆ ವಿವರ ನೀಡುವುದು)

(ಈ) ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಯಾವ ಯಾವ ಅನುದಾನಗಳಿಂದ ವೇತನ ಪಾವತಿ ಮಾಡಲಾಗುತ್ತಿದೆ? (ಅನುದಾನವಾರು ಮಾಹಿತಿಯ ವಿವರ ನೀಡುವುದು)

## ಕೊಳವೆ ಬಾವಿಗಳ ನಿರ್ಮಾಣಕ್ಕಾಗಿ ಆದ ವೆಚ್ಚ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೫೬೬ (೬೮೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ೨೦೧೩–೧೪ ಮತ್ತು ೨೦೧೪–೧೫, ೨೦೧೫–೧೬ನೇ ಸಾಲಿನಲ್ಲಿ ಕುಡಿಯುವ ನೀರಿಗಾಗಿ ಕೊರೆಯಲಾದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; (ಸಂಸ್ಥೆಗಳವಾರು ವರ್ಷವಾರು ವಿವರವಾದ ಮಾಹಿತಿ ನೀಡುವುದು)

(ಆ) ಈ ಕೊಳವೆ ಬಾವಿಗಳಿಗೆ ಖರ್ಚು ಮಾಡಲಾದ ವೆಚ್ಚ ಎಷ್ಟು; ಹಾಗೂ ಯಾವ ಯಾವ ಅನುದಾನದಲ್ಲಿ ಬಿಲ್ಲು ಪಾವತಿ ಮಾಡಲಾಗಿದೆ; ಬಿಲ್ಲು ಪಾವತಿ ಮಾಡಿದ್ದಲ್ಲಿ ಆಯ್ಕೆ ಏಜೆನ್ಸಿಗಳ ಪೂರ್ಣ ಮಾಹಿತಿಯ ವಿವರ ನೀಡುವುದು ;

(ಇ) ಕೊರೆಯಲಾದ ಎಷ್ಟು ಕೊಳವೆ ಬಾವಿಗಳಲ್ಲಿ ನೀರು ದೊರೆತಿದೆ ಹಾಗೆ ದೊರೆಯಲಾಗದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; ನೀರು ದೊರೆತ/ದೊರೆಯದೇ ಇರುವ ಕೊಳವೆ ಬಾವಿಗಳ ಸ್ಥಳವಾರು ವಿವರ ನೀಡುವುದು ?

## ನಂಜನಗೂಡು ನಗರದಲ್ಲಿ ಕಸದ ರಾಶಿ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೬೭ (೬೩೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಂಜನಗೂಡು ನಗರದಲ್ಲಿ ಎಲ್ಲೆಂದರಲ್ಲಿ ಕಸದ ರಾಶಿ ಚರಂಡಿಗಳ ಸ್ವಚ್ಛತೆ ಇಲ್ಲದೆ ಕಲುಷಿತ ನೀರು ನಿಂತಿರುವುದು ರಸ್ತೆಗಳ ದುರಸ್ಥಿಯಾಗದೇ ಹಳ್ಳ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನಂಜನಗೂಡು ನಗರದಲ್ಲಿ ಸ್ವಚ್ಛತೆಯ ಗುತ್ತಿಗೆ ಪಡೆದಿರುವವರು ಯಾರು ; ಎಷ್ಟು ಜನ ಪೌರಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ; ಇವರಿಗೆ ನಿಯಮಿತ ವೇತನ ನೀಡಲಾಗುತ್ತಿದೆಯೇ;

(ಇ) ನಂಜನಗೂಡು ನಗರದ ಅಪೋಲೋ ವೃತ್ತದಿಂದ ಶ್ರೀಕಂಠೇಶ್ವರ ದೇವಾಲಯದವರೆಗೆ (೧.೫) ಕಿ.ಮೀ ರಸ್ತೆಯ ಉದ್ದಕ್ಕೂ ಇರುವ ವಿದ್ಯುತ್ ಕಂಬಗಳಿಗೆ ಅಳವಡಿಸಿರುವ ವಿದ್ಯುತ್ ದೀಪಗಳು ಬೆಳಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದಕ್ಕೆ ಕಾರಣಗಳೇನು ಕೂಡಲೇ ಎಲ್ಲಾ ಕಂಬಗಳಿಗೆ ವಿದ್ಯುತ್ ದೀಪ ಅಳವಡಿಸಿ ವಿದ್ಯುತ್ ಸಂಪರ್ಕ ಕಲ್ಪಿಸಿ ದೀಪಗಳನ್ನು ಬೆಳಗಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಗುಂಡ್ಲು ಪೇಟೆಯಿಂದ ಬಾಚಹಳ್ಳಿಗೆ ಹೋಗುವ ರಸ್ತೆ ಅಭಿವೃದ್ಧಿ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೬೮ (೬೨೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಂಡ್ಲು ಪೇಟೆಯಿಂದ ಬಾಚಹಳ್ಳಿಗೆ ಹೋಗುವ, ಅಣ್ಣೂರು ಕೇರಿ, ಶಿವಪುರ, ಬೊಮ್ಮಲಾಪುರ ಅಂಕಹಳ್ಳಿ ಹಾಗೂ ಗ್ರಾಮಗಳ ಸಂಪರ್ಕ ರಸ್ತೆ ಪೂರ್ಣವಾಗಿ ಗುಂಡಿ ಬಿದ್ದು, ಮಳೆ ಬಂದರೆ ಕೆಸರುಗದ್ದೆ ಆಗುವ ಸಂಭವ ಇರುವುದರಿಂದ ಇವುಗಳ ದುರಸ್ಥಿಗೆ ಕೂಡಲೇ ಕ್ರಮ ಜರುಗಿಸಲಾಗುವುದೇ ;

(ಆ) ಶಿಂಡನನಪುರ, ಮೊಳ್ಳಯ್ಯನ ಹುಂಡಿ, ಕಂದೇಗಾಲ, ಕೊಡಸೋಗೆ, ಬೊಮ್ಮಲಾಪುರ ರಸ್ತೆಯು ಸಂಪೂರ್ಣವಾಗಿ ಗುಂಡಿಬಿದ್ದು ಹಾಳಾಗಿರುವುದರಿಂದ, ಈ ರಸ್ತೆಯು ದುರಸ್ಥಿ ಕ್ರಮ ಜರುಗಿಸಲಾಗುವುದೇ;

(ಇ) ಈ ಎರಡೂ ರಸ್ತೆಗಳ ದುರಸ್ಥಿಗೆ ಕೈಗೊಂಡಿರುವ ಕ್ರಮಗಳೇನು ಅನುದಾನವನ್ನು ಬಿಡುಗಡೆ ಮಾಡಿ ಕಾರ್ಯ ಆರಂಭ ಮಾಡಲಾಗಿದೆಯೇ;

(ಈ) ಈ ಎರಡೂ ರಸ್ತೆಗಳು ಗುಂಡ್ಲುಪೇಟೆ ತಾಲ್ಲೂಕು ಪ್ರಮುಖ ಗ್ರಾಮೀಣ ಭಾಗಕ್ಕೆ ಸಂಪರ್ಕ ಕಲ್ಪಿಸುವ ಮತ್ತು ಪ್ರವಾಸಿ ಧಾರ್ಮಿಕ ಕೇಂದ್ರವಾದ ಕಂದೇಗಾಲದ ಪಾರ್ವತಿ ಬೆಟ್ಟ ಮತ್ತು ಕೊಡಸೋಗೆ ಚೆಲುವನಾರಾಯಣ ಮತ್ತು ಶಿವ ದೇವಾಲಯಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳಾಗಿರುವುದರಿಂದ ಇವುಗಳ ದುರಸ್ತಿಗೆ ಕೂಡಲೇ ಕ್ರಮ ಜರುಗಿಸಲಾಗುವುದೇ ?

## ಕಬ್ಬು ಸರಬರಾಜಿನ ಬಾಕಿ ಹಣ ರೈತರಿಗೆ ಪಾವತಿ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೭೯ (೬೩೧) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಣ್ಣಾರಿ ಅಮ್ಮನ್ ಸಕ್ಕರೆ ಕಾರ್ಖಾನೆಯಿಂದ ರೈತರಿಗೆ ಸಂದಾಯವಾಗಬೇಕಾಗಿರುವ ಕಬ್ಬು ಸರಬರಾಜಿನ ಬಾಕಿ ಹಣ ಎಷ್ಟು ; ಬಾಕಿ ಹಣವನ್ನು ರೈತರಿಗೆ ಕೂಡಲೇ ನೀಡುವಂತೆ ಸೂಚಿಸಲಾಗುವುದೇ ;

(ಆ) ಸರ್ಕಾರ ಒಂದು ಟನ್ ಕಬ್ಬಿಗೆ ನಿಗಧಿಪಡಿಸಿದ ಎಫ್.ಆರ್.ಪಿ. ದರ ಎಷ್ಟು ; ಸದರಿ ಕಾರ್ಖಾನೆಯವರು ಅದನ್ನು ನೀಡದೆ ಕಡಿಮೆ ಹಣ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ತಿರುಮಕೂಡಲು ನರಸೀಪುರ ಅಭಿವೃದ್ಧಿ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೭೦ (೬೩೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತಿರುಮಕೂಡಲು ನರಸೀಪುರ ಅಭಿವೃದ್ಧಿಗೆ ಕಾಮಗಾರಿಗಳನ್ನು ಯಾವ ಯಾವ ಯೋಜನೆಗಳ ಅಡಿಯಲ್ಲಿ ಕೈಗೊಳ್ಳಲಾಗಿದೆ ; ಈ ಕಾಮಗಾರಿಗಳಿಗೆ ಒದಗಿಸಿರುವ ಅನುದಾನ ಎಷ್ಟು ; ಸದರಿ ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿದೆ ; (ವಿವರ ಒದಗಿಸುವುದು)

(ಆ) ತಿರುಮಕೂಡಲು ನರಸೀಪುರ, ಬೈರಾಪುರಗಳ ಚರಂಡಿಯ ನೀರು ಕಾವೇರಿ ಕಪಿಲಾ ನದಿಯನ್ನು ಸೇರುತ್ತಿದ್ದು ನದಿಯ ನೀರು ಕಲುಷಿತವಾಗಿರುವುದು, ಇದೇ ನೀರನ್ನು ಕುಡಿಯಲು ಪೂರೈಸುವುದು, ಇದರಿಂದ ಜನಜಾನುವಾರುಗಳ ಆರೋಗ್ಯದ

ಮೇಲೆ ಪರಿಣಾಮವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಚರಂಡಿ ನೀರನ್ನು ನದಿಗೆ ಬಿಡದೇ ಬೇರೆ ಕಡೆಗೆ ತಿರುಗಿಸುವ ಯೋಜನೆ ಯಾವ ಹಂತದಲ್ಲಿದೆ ? (ವಿವರ ಒದಗಿಸುವುದು)

## ರಾಜ್ಯದಲ್ಲಿ ರೈತರಿಗೆ ವಿವಿಧ ಯೋಜನೆಯಡಿಯಲ್ಲಿನ ಸಹಾಯಧನದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೭೧ (೫೧೯) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರಿಗೆ ಯಾವ ಯಾವ ಯೋಜನೆಯಡಿಯಲ್ಲಿ ಯಾವ ರೀತಿಯ ಸಹಾಯಧನ ಸಿಗುತ್ತದೆ ;

(ಆ) ಈ ರೀತಿಯ ಸಹಾಯಧನವನ್ನು ಇನ್ನು ಹೆಚ್ಚಿಗೆಗೊಳಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಇ) ಇದ್ದರೆ, ಯಾವ ಯಾವ ಕೃಷಿ ಕೆಲಸಗಳಿಗೆ ಅಥವಾ ಉಪಕರಣಗಳಿಗೆ ನೀಡಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಹಾವೇರಿ ಜಿಲ್ಲೆಗೆ ೨೦೧೩–೧೪ ರಿಂದ ೨೦೧೫–೧೬ ರಲ್ಲಿ ೩೦೫೪ ಮತ್ತು ೫೦೫೪ ಹೆಡ್‌ನ ಅನುದಾನದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೭೨ (೫೦೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಗೆ ೨೦೧೩–೧೪ ರಿಂದ ೨೦೧೫–೧೬ ರವರೆಗೆ ಸರ್ಕಾರದ ३೦೫४ ಮತ್ತು ५०५४ ಹೆಡ್‌ನಲ್ಲಿ ಬಂದ ಅನುದಾನವೆಷ್ಟು ;

(ಆ) ಇದರಲ್ಲಿ ಖರ್ಚು ಮಾಡಿದ ಹಣವೆಷ್ಟು ; ಯಾವ ಕೆಲಸಕ್ಕೆ ಎಷ್ಟು ರೂ. ಖರ್ಚಾಗಿದೆ ; (ಅದರ ಹೆಸರು ಊರಿನ ಹೆಸರು ಸಮೇತ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಹಾವೇರಿ ಜಿಲ್ಲೆ ಹಾವೇರಿ ದಿಂದ ಸಾಗರ ವಯಾ ಕಾಗಿನೆಲೆ ಹಂಸಬಾವಿ ರಸ್ತೆಗೆ ಎಷ್ಟು ವೆಚ್ಚವಾಗಿದೆ ; ಈ ರಸ್ತೆ ಕಾಮಗಾರಿಯು ಕಳಪೆ ಕಾಮಗಾರಿ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರದಿಂದ ಕೈಗೊಂಡ ಕ್ರಮವೇನು?

## ಹಾವೇರಿ ಜಿಲ್ಲೆಯ ನಗರೋತ್ಥಾನ ಕಾಮಗಾರಿಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೭೩ (೫೦೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿ ನಗರೋತ್ಥಾನ ಕಾಮಗಾರಿಗಳು ಕಳಪೆ ಮಟ್ಟದ್ದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಎಲ್ಲೆಲ್ಲಿ ಎಷ್ಟು ಮೊತ್ತದ ಎಷ್ಟು ಕಳಪೆ ಮಟ್ಟದ ಕಾಮಗಾರಿಗಳಾಗಿವೆ ;

(ಇ) ಕಳಪೆ ಮಟ್ಟದ ಕಾಮಗಾರಿಗಳ ಬಗ್ಗೆ ತನಿಖೆ ನಡೆಸಿ ತಪ್ಪಿತಸ್ಥರ ಮೇಲೆ ಯಾವ ಕ್ರಮ ಕೈಗೊಂಡಿದೆ ?

## ಹಾವೇರಿ ಜಿಲ್ಲೆಯಲ್ಲಿ ಬೇಸಿಗೆಯಲ್ಲಿ ಹತ್ತಿ ಬೆಳೆಯುವ ಕ್ಷೇತ್ರದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೭೪ (೫೦೬) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿ ಬೇಸಿಗೆಯಲ್ಲಿ ಹತ್ತಿ ಬೆಳೆಯುವ ಕ್ಷೇತ್ರ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಬೇಸಿಗೆಯಲ್ಲಿ ಹತ್ತಿ ಬೀಜ ಹಾವೇರಿ ಜಿಲ್ಲೆಯಲ್ಲಿ ಸಿಗುವುದಿಲ್ಲ ಎಂಬ ಕೂಗು ಜಿಲ್ಲೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ಬೇಸಿಗೆ ಬಿತ್ತನೆ ಬೀಜದ ಕೊರತೆ ನೀಗಿಸಿದ್ದಾರೆಯೇ?

## ರಾಜ್ಯದಲ್ಲಿ ತೆಂಗು ಬೆಳೆಯುವ ಪ್ರದೇಶ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೫೭೫ (೫೦೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ತೆಂಗು ಬೆಳೆಯುವ ಪ್ರದೇಶ ಎಷ್ಟು ಹೆಕ್ಟೇರ್ ಇದೆ ;

(ಆ) ದೇಶದ ಒಟ್ಟು ತೆಂಗು ಉತ್ಪಾದನೆಯಲ್ಲಿ ರಾಜ್ಯದ ಸ್ಥಾನ ಯಾವುದು; ಎಷ್ಟು ಪಾಲು ;

(ಇ) ತೆಂಗು ಬೆಳೆಗಾರರ ಅಭಿವೃದ್ಧಿಗೆ ಸರ್ಕಾರ ಕೈಗೊಂಡ ಕ್ರಮಗಳೇನು?

## ರಾಜ್ಯದಲ್ಲಿಯ ವಿದ್ಯುತ್ ಕೊರತೆಯ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೫೭೬(೬೨೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಒಟ್ಟು ವಿದ್ಯುತ್ತಿನ ಕೊರತೆ ಪ್ರಮಾಣ ಎಷ್ಟು; ಇದನ್ನು ಸರಿಪಡಿಸಲು ಯಾವ–ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಆ) ಪರೀಕ್ಷಾ ಸಮಯದಲ್ಲಿ ವಿದ್ಯುತ್ ಕಡಿತ ಮಾಡುವುದಿಲ್ಲ ಎಂಬ ಭರವಸೆ ನೀಡಿ, ದಿನಕ್ಕೆ ೩–೪ ಬಾರಿ ವಿದ್ಯುತ್ ಕಡಿತ ಮಾಡುತ್ತಿರುವುದು ತಮ್ಮ ಹೇಳಿಕೆಗೆ ವ್ಯತಿರಿಕ್ತವಾಗುವುದಿಲ್ಲವೇ; ಮಕ್ಕಳ ಪರೀಕ್ಷೆಯ ಹಿತದೃಷ್ಟಿಯಿಂದ ಪರೀಕ್ಷೆಗಳೂ ಮುಗಿಯುವವರೆಗೂ ನಿರಂತರ ವಿದ್ಯುತ್ ಪೂರೈಕೆ ಮಾಡುವ ಹಾಗೆ ಯಾವ ರೀತಿ ಕ್ರಮ ಕೈಗೊಳ್ಳಲಾಗುವುದು ;

(ಇ) ಬೇಸಿಗೆ ದಿನಗಳಲ್ಲಿ ವಿದ್ಯುತ್ತಿನ ಬೇಡಿಕೆ ಹೆಚ್ಚಾಗಿರುವುದು ನಿಜವೇ; ಹಾಗಿದ್ದಲ್ಲಿ, ಅದನ್ನು ಸರಿಪಡಿಸಲು ಯಾವ ರೀತಿ ಕ್ರಮ ಕೈಗೊಳ್ಳಲಾಗುವುದು ?

## ಕೊಡಗು ಜಿಲ್ಲೆಯಲ್ಲಿರುವ ಹಳೆಯ ಮತ್ತು ಶಿಥಿಲಗೊಂಡಿರುವ ಕಟ್ಟಡಗಳ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭೭ (೬೨೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿರುವ ಸರ್ಕಾರಿ ಕಟ್ಟಡಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇವುಗಳಲ್ಲಿ ೪೦ ವರ್ಷಗಳಷ್ಟು ಹಳೆಯದಾದ ಕಟ್ಟಡಗಳು ಎಷ್ಟು; ಇವುಗಳ ದುರಸ್ಥಿ ಕಾರ್ಯಕ್ಕೆ ಕೈಗೊಂಡಿರುವ ಕ್ರಮಗಳೇನು?

## ರಾಜ್ಯದ ವಿವಿಧ ಭಾಗಗಳಲ್ಲಿ ತ್ಯಾಜ್ಯ ವಿದ್ಯುತ್ ಘಟಕ ನಿರ್ಮಾಣ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭೮ (೪೯೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರವು ಸೇರಿದಂತೆ ರಾಜ್ಯದ ವಿವಿಧ ಭಾಗಗಳಲ್ಲಿರುವ ತ್ಯಾಜ್ಯ ವಿದ್ಯುತ್ ಘಟಕಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ಇವುಗಳಿಂದ ಉತ್ಪಾದನೆಯಾಗುವ ವಿದ್ಯುತ್ ಪ್ರಮಾಣವೆಷ್ಟು; ಉತ್ಪಾದನಾ ಸಾಮರ್ಥ್ಯವನ್ನು ಯೂನಿಟ್‌ಗಳಲ್ಲಿ ವಿವರ ನೀಡುವುದು ಹಾಗೂ ಈ ಉತ್ಪಾದನೆಗೆ ಖರ್ಚಾಗುವ ಮೊತ್ತ ಎಷ್ಟು ; ತಲಾ ಘಟಕಗಳವಾರು ವೆಚ್ಚವೆಷ್ಟು ; (ವಿವರ ನೀಡುವುದು)

(ಇ) ತ್ಯಾಜ್ಯ ವಿದ್ಯುತ್ ಘಟಕಗಳು ಹಸಿ ಕಸ ಸಮರ್ಪಕವಾಗಿ ಪೂರೈಕೆಯಾಗದೇ ಉತ್ಪಾದನೆ ಸ್ಥಗಿತಗೊಳಿಸಿರುವುದು ನಿಜವೇ ;

(ಈ) ಹಾಗಿದ್ದಲ್ಲಿ, ಅಗತ್ಯವಾದ ಕಸ ಪೂರೈಕೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ಒದಗಿಸುವುದು)

(ಉ) ಘಟಕ ವೆಚ್ಚ ಹಾಗೂ ಉತ್ಪಾದನಾ ವೆಚ್ಚಗಳು ಉತ್ಪಾದನೆಯಿಂದ ಬರುವ ಇಂಧನ ಬಳಕೆ ವೆಚ್ಚಕ್ಕೆ ಸರಿದೂಗುವುದೇ ? (ವಿವರ ನೀಡುವುದು)

## ರಸ್ತೆಗಳ ದುರಸ್ಥಿ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭೯ (೬೩೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯ ಹೆದ್ದಾರಿ ಸಂಪರ್ಕ ರಸ್ತೆ ಮತ್ತು ಗ್ರಾಮಾಂತರ ಪ್ರದೇಶಗಳ ರಸ್ತೆಗಳಿಗೆ ಪ್ರಸಕ್ತ ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನವೆಷ್ಟು ;

(ಆ) ಇದುವರೆವಿಗೂ ವೆಚ್ಚ ಮಾಡಿರುವ ಅನುದಾನವೆಷ್ಟು ; ಎಷ್ಟು ಕಿ.ಮೀ ಪ್ರದೇಶದ ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗಿದೆ ?

## ರಾಷ್ಟ್ರೀಯ ತೋಟಗಾರಿಕಾ ವಿಷನ್ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೦ (೬೪೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ರಾಷ್ಟ್ರೀಯ ತೋಟಗಾರಿಕಾ ವಿಷನ್ ಯೋಜನೆ ಜಾರಿಯಲ್ಲಿದೆಯೇ ;

(ಆ) ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ಈ ಯೋಜನೆ ಅನುಷ್ಠಾನಗೊಂಡಿದೆ ;

(ಇ) ಕಳೆದ ೨ ವರ್ಷಗಳಲ್ಲಿ ಈ ಯೋಜನೆಗೆ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರ ಬಿಡುಗಡೆ ಮಾಡಿರುವ ಒಟ್ಟು ಅನುದಾನವೆಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

## ಪಶು ಚಿಕಿತ್ಸೆ ಆಸ್ಪತ್ರೆಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೧ (೬೩೮) ಮಾನ್ಯ ಪಶು ಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿರುವ ಪಶು ಚಿಕಿತ್ಸೆ ಆಸ್ಪತ್ರೆಗಳ ಸಂಖ್ಯೆ ಎಷ್ಟು;

(ಆ) ಪ್ರಸ್ತುತ ಸದರಿ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಶುವೈದ್ಯ ಮತ್ತು ಸಿಬ್ಬಂದಿಯ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಸದರಿ ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳುವುದು ?

## ಮೂಲಭೂತ ಸೌಲಭ್ಯಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೨ (೬೪೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಕೃಷಿ ಮಾರುಕಟ್ಟೆಗಳ ಮೂಲಭೂತ ಸೌಲಭ್ಯಗಳ ಕೊರತೆಯಿಂದ ಕೃಷಿ ಉತ್ಪನ್ನಗಳು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದರೆ, ಸರ್ಕಾರ ಇದನ್ನು ತಪ್ಪಿಸಲು ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗುವುದು ;

(ಇ) ರೈತರಿಗೆ ಕೃಷಿ ಉತ್ಪನ್ನಗಳನ್ನು ಸರಿಯಾದ ಬೆಲೆಗೆ ಮಾರಾಟ ಮಾಡಲು ಸರ್ಕಾರ ಕೈಗೊಂಡಿರುವ ಯೋಜನೆಗಳಾವುವು ;

(ಈ) ಇವುಗಳಲ್ಲಿ ಯಾವ ಯಾವ ಉತ್ಪನ್ನಗಳಿಗೆ ಎಷ್ಟರ ಪ್ರಮಾಣದಲ್ಲಿ ಸಬ್ಸಿಡಿ ನೀಡಲಾಗುವುದು ? (ವಿವರ ನೀಡುವುದು)

## ಬೀದರ್ ಜಿಲ್ಲೆಯ ವಿದ್ಯುತ್ ಸಮಸ್ಯೆ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೮೩ (೬೭೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಕೆಲವು ಹಳ್ಳಿಗಳು ವಿದ್ಯುತ್ ಸಂಪರ್ಕ ಸೌಲಭ್ಯದಿಂದ ವಂಚಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹೈದರಬಾದ್–ಕರ್ನಾಟಕದ ೬ ಜಿಲ್ಲೆಗಳಿಗೆ ಬೇಸಿಗೆ ಕಾಲದಲ್ಲಿ ವಿದ್ಯುತ್ ಸಂಪರ್ಕವನ್ನು ಒದಗಿಸಲು ಸರ್ಕಾರ ಏನು ಕ್ರಮಕೈಗೊಂಡಿದೆ ;

(ಇ) ಗಡಿಭಾಗದ ಬೀದರ್ ಜಿಲ್ಲೆಯಲ್ಲಿ ಕೆಲವು ಪಟ್ಟಣಗಳು ಮತ್ತು ಕೆಲವು ಹಳ್ಳಿಗಳಿಗೆ ವಿದ್ಯುತ್ ಸಂಪರ್ಕ ಸರಿಯಾಗಿ ಇಲ್ಲದೆ, ಪರೀಕ್ಷೆ ಸಮಯದಲ್ಲಿ ವಿದ್ಯಾರ್ಥಿಗಳಿಗೆ ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಲೋಕೋಪಯೋಗಿ ಇಲಾಖಾ ವತಿಯಿಂದ ಹಮ್ಮಿಕೊಂಡಿರುವ ಯೋಜನೆಗಳ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೮೪ (೬೭೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಪ್ರಗತಿಯಲ್ಲಿರುವ ಯೋಜನೆಗಳು ಯಾವುವು ; ಅವುಗಳಿಗೆ ಮೀಸಲಿಟ್ಟ ಹಣವೆಷ್ಟು ; (ತಾಲ್ಲೂಕುವಾರು, ಯೋಜನಾವಾರು ವಿವರ ನೀಡುವುದು)

(ಆ) ಈ ಜಿಲ್ಲೆಯಲ್ಲಿ ಇಲಾಖೆಯ ವತಿಯಿಂದ ಹಮ್ಮಿಕೊಳ್ಳಲು ಉದ್ದೇಶಿಸಿರುವ ಯೋಜನೆಗಳು ಯಾವುವು ; ಅವುಗಳ ರೂಪುರೇಷೆಗಳೇನು ? (ಯೋಜನಾವಾರು ವಿವರ ನೀಡುವುದು)

(ಇ) ಇಲಾಖೆಗೆ ಜಿಲ್ಲೆಯಲ್ಲಿ ಹೊಸ ಬೇಡಿಕೆಗಳೇನಾದರೂ ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು ?

## ರೈತರಿಗೆ ಹಮ್ಮಿಕೊಂಡಿರುವ ಯೊಜನೆಗಳು

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೫೮೫ (೬೪೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯಲ್ಲಿ ರೈತರಿಗಾಗಿ ಹಮ್ಮಿಕೊಂಡಿರುವ ಯೋಜನೆಗಳು ಯಾವುವು ;

(ಆ) ಈ ಯೋಜನೆಗಳಿಗೆ ಕಳೆದ ಮೂರು ವರ್ಷಗಳಿಂದ ಖರ್ಚು ಮಾಡಿರುವ ಹಣ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಕೃಷಿ ಮಾರುಕಟ್ಟೆ ಜಪ್ತಿ ಪ್ರಕರಣಗಳು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮ ನಿರ್ದೇಶನ ಹೊಂದಿದವರು) :–**

೫೮೬ (೬೪೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಮಾರುಕಟ್ಟೆಯಲ್ಲಿ ಕಳೆದ ಮೂರು ವರ್ಷಗಳಿಂದ ಇಲಾಖೆಗೆ ಬಂದಿರುವ ಸುಂಕ ಎಷ್ಟು ;

(ಆ) ಕೃಷಿ ಮಾರುಕಟ್ಟೆಯಲ್ಲಿ ತನಿಖಾ ದಳದ ಅಧಿಕಾರಿಗಳು ಜಪ್ತಿ ಮಾಡಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಇದರಲ್ಲಿ ಎಷ್ಟು ಕೇಸುಗಳು ಬಾಕಿ ಇವೆ ? (ಮಾಹಿತಿ ನೀಡುವುದು)

## ಸಹಕಾರ ಸಂಘಗಳ ವತಿಯಿಂದ ಅಲ್ಪಸಂಖ್ಯಾತರಿಗೆ ಸಾಲ ನೀಡುವ ಕುರಿತು

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮ ನಿರ್ದೇಶನ ಹೊಂದಿದವರು) :–**

೫೮೭ (೬೫೭) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಹಕಾರ ಸಂಘಗಳ ವತಿಯಿಂದ ಅಲ್ಪ ಸಂಖ್ಯಾತರ ರೈತರಿಗೆ ಸಾಲವನ್ನು ವಿತರಿಸಲಾಗುತ್ತಿದೆಯೇ ; ಇದ್ದಲ್ಲಿ, ಯೋಜನೆಯ ವಿವರ ಒದಗಿಸುವುದು ;

(ಆ) ಇಲ್ಲವಾದಲ್ಲಿ, ಸೂಕ್ತ ಕಾರಣ ಒದಗಿಸುವುದು ;

(ಇ) ಅಲ್ಪ ಸಂಖ್ಯಾತರ ರೈತರಿಗೆ ಸಹಕಾರ ಸಂಘಗಳ ವತಿಯಿಂದ ಸಾಲ ನೀಡುವ ಯೋಜನೆಯಿದ್ದರೆ ಕಲಬುರಗಿ ಜಿಲ್ಲೆಯ ಒಟ್ಟು ಎಷ್ಟು ರೈತರಿಗೆ ಸಾಲ ನೀಡಲಾಗಿದೆ ? (ವಿವರ ಒದಗಿಸುವುದು)

## ಹನಿ ನೀರಾವರಿ ಸಹಾಯ ಧನದ ಬಗ್ಗೆ

**ಶ್ರೀ ಟಿ. ಎ. ಶರವಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೮೮ (೫೨೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆ ಎರಡು ವರ್ಷಗಳಲ್ಲಿ ತೋಟಗಾರಿಕೆ ಇಲಾಖೆಯು ಸೂಕ್ಷ್ಮ ನೀರಾವರಿ ಯೋಜನೆಯಡಿ ಖರ್ಚು ಮಾಡಿರುವ ಹಣವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಯೋಜನೆಯನ್ನು ಜಿ.ಜಿ.ಆರ್.ಸಿ. ಗುಜರಾತ್ ಮಾದರಿ ಪದ್ಧತಿಯಲ್ಲಿ ಅನುಷ್ಠಾನಗೊಳಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇದರಿಂದ ರೈತರು ನಷ್ಟ ಅನುಭವಿಸುತ್ತಿರುವುದು ನಿಜವೇ ;

(ಇ) ಜಿ.ಜಿ.ಆರ್.ಸಿ ಮಾದರಿ ಪದ್ಧತಿಯಲ್ಲಿ ಅನುಷ್ಠಾನಗೊಳಿಸಲು ಗುಜರಾತ್ ರಾಜ್ಯದಿಂದ ಸಾಫ್ಟ್‌ವೇರ್ ಖರೀದಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸಾಫ್ಟ್‌ವೇರ್ ಅಭಿವೃದ್ಧಿಗೆ ವಿಶ್ವ ವಿಖ್ಯಾತವಾಗಿರುವ 'ಬೆಂಗಳೂರು ನಗರ' ನಮ್ಮ ರಾಜ್ಯದಲ್ಲಿರುವಾಗ ಬೇರೆ ರಾಜ್ಯದಿಂದ ಸಾಫ್ಟ್‌ವೇರ್ ಖರೀದಿಸುವುದು ಅವಶ್ಯಕತೆಯಿದೆಯೇ; ಇದಕ್ಕೆ ತಗಲುವ ವೆಚ್ಚ ಎಷ್ಟು ? (ವಿವರಗಳನ್ನು ನೀಡುವುದು)

## ಸಾರಿಗೆ ಸಂಸ್ಥೆಯ ಗೃಹ ನಿರ್ಮಾಣ ಮಂಡಳಿಯ ನಿವೇಶನಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮ ನಿರ್ದೇಶನ ಹೊಂದಿದವರು) :–**

೫೮೯ (೬೧೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಗೃಹ ನಿರ್ಮಾಣ ಮಂಡಳಿ, ಬೆಂಗಳೂರು ವತಿಯಿಂದ ನೆಲಮಂಗಲ ತಾಲ್ಲೂಕಿನ ಕಣೇಗೌಡನ ಹಳ್ಳಿ ಮತ್ತು ನಾರಾಯಣರಾವ್ ಪಾಳ್ಯದಲ್ಲಿ ಸಂಸ್ಥೆಯ ಸದಸ್ಯ ನೌಕರರಿಗೆ ನಿವೇಶನ ನೀಡುವ ಸಲುವಾಗಿ ಖರೀದಿಸಿದ ಜಮೀನಿನ ವಿಸ್ತೀರ್ಣವೆಷ್ಟು ;

(ಆ) ಸದರಿ ನಿವೇಶನಗಳನ್ನು ಅಭಿವೃದ್ಧಿಪಡಿಸಲು ವಹಿಸಲಾಗಿರುವ ಸಂಸ್ಥೆ ಯಾವುದು ; ಆ ಜಮೀನಿನಲ್ಲಿ ರಚಿಸಿರುವ ವಿವಿಧ ಅಳತೆಯ ನಿವೇಶನಗಳೆಷ್ಟು ; (ಅಳತೆವಾರು ಪೂರ್ಣ ವಿವರ ನೀಡುವುದು)

(ಇ) ಸದರಿ ಪ್ರದೇಶದಲ್ಲಿ ನಿವೇಶನ ಪಡೆಯುವ ಸಲುವಾಗಿ ಅರ್ಜಿ ಸಲ್ಲಿಸಿರುವ ಸದಸ್ಯರ ಒಟ್ಟು ಸಂಖ್ಯೆ ಎಷ್ಟು ; ಆ ಪೈಕಿ ವಿವಿಧ ಅಳತೆಯ ನಿವೇಶನ ಖರೀದಿಸಲು ಎಷ್ಟು ಜನ ಸದಸ್ಯರು, ಎಷ್ಟೆಷ್ಟು ಹಣ ಪಾವತಿಸಿದ್ದಾರೆ ; (ನಿವೇಶನವಾರು ಸದಸ್ಯರ ಪೂರ್ಣ ವಿವರ ನೀಡುವುದು) ನಿವೇಶನ ಹಂಚಿಕೆ ಮಾಡಲು ಅನುಸರಿಸುತ್ತಿರುವ ಮಾನದಂಡಗಳೇನು ;

(ಈ) ಮೇಲ್ಕಂಡ ಜಮೀನಿನಲ್ಲಿ ರಚಿಸಿರುವ ವಿವಿಧ ಅಳತೆಯ ನಿವೇಶನಗಳಲ್ಲಿ ಈಗಾಗಲೇ ಎಷ್ಟು ಜನ ಸದಸ್ಯರಿಗೆ ನಿವೇಶನ ಹಂಚಿಕೆ ಮಾಡಲಾಗಿದೆ ; (ಪೂರ್ಣ ವಿವರ ನೀಡುವುದು) ಹಂಚಿಕೆ ಮಾಡದಿದ್ದರೆ, ಅದಕ್ಕೆ ಕಾರಣಗಳೇನು ?

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0 314/1000 ಪ್ರತಿಗಳು/18–03–2016